# ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು-560 001.

**ಸಂಖ್ಯೆ: ಇ(1) 6314/2011-12/ಪಿಎಸ್‌ಸಿ** **ದಿನಾಂಕ: 03-11-2011.**

## ಅಧಿಸೂಚನೆ

1. ಕರ್ನಾಟಕ ಗೆಜ಼ೆಟೆಡ್ ಪ್ರೊಬೇಷನರ್ಸ್ (ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕ ನೇಮಕಾತಿ) ನಿಯಮಗಳು 1997 ಹಾಗೂ ಕಾಲಕಾಲಕ್ಕೆ ತಿದ್ದುಪಡಿಯಾದ ನಿಯಮಗಳಡಿಯಲ್ಲಿ 2011ರ ಸಮೂಹ 'ಎ' ಮತ್ತು 'ಬಿ' ವೃಂದದ **352** ಹುದ್ದೆಗಳನ್ನು ಭರ್ತಿ ಮಾಡಲು ಆಯೋಗವು ನಡೆಸುವ ಪೂರ್ವಭಾವಿ ಪರೀಕ್ಷೆಗೆ ಅರ್ಹ ಅಭ್ಯರ್ಥಿಗಳಿಂದ ON-LINE ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ.

**ಈ ಹುದ್ದೆಗಳಿಗೆ ಪೂರ್ವಭಾವಿ ಪರೀಕ್ಷೆಯನ್ನು 2012ರ ಫೆಬ್ರವರಿ ತಿಂಗಳಿನಲ್ಲಿ ನಡೆಸಲು ಉದ್ದೇಶಿಸಿದೆ.**

2. ಹುದ್ದೆಗಳ ವರ್ಗೀಕರಣದ ವಿವರವನ್ನು ಅನುಬಂಧದಲ್ಲಿ ತೋರಿಸಿದೆ.

3. **ಅರ್ಜಿ ಸಲ್ಲಿಸುವ ವಿಧಾನ:-** ಅಭ್ಯರ್ಥಿಗಳು **ON LINE** ಮೂಲಕ ಅರ್ಜಿಗಳನ್ನು ಭರ್ತಿ ಮಾಡಬೇಕು. ಅಭ್ಯರ್ಥಿಯು ಆಯೋಗದ ಅಧಿಕೃತ ವೆಬ್‌ಸೈಟ್ **"http://kpsc.kar.nic.in"** ತೆರೆದ ಕೂಡಲೇ ಕಂಪ್ಯೂಟರ್ ಪರದೆಯ ಬಲ ಭಾಗದಲ್ಲಿ **"On-line Application"** ಎಂಬುದು **"Blink"** ಆಗುತ್ತಲಿದ್ದು, ಅದರ ಮೇಲೆ ಕ್ಲಿಕ್ ಮಾಡಬೇಕು. ಆನ್‌ಲೈನ್ ಮೂಲಕ ಅರ್ಜಿಯನ್ನು ಭರ್ತಿ ಮಾಡುವ ಮುನ್ನ ಅಧಿಸೂಚನೆ / ಸೂಚನೆಗಳನ್ನು ತಪ್ಪದೆ ಓದಿಕೊಂಡು ನಂತರ ಷರತ್ತುಗಳನ್ನು ಒಪ್ಪಿಕೊಂಡು ಮುಂದುವರೆಯತಕ್ಕದ್ದು. ಹೊಸ ಅರ್ಜಿಗೆ Apply button ಮೇಲೆ Click ಮಾಡುವುದು.

3.1 ಅರ್ಜಿಯನ್ನು ಸರಿಯಾಗಿ ಓದಿಕೊಂಡ ನಂತರ ಗಮನವಿಟ್ಟು ವೈಯಕ್ತಿಕ ವಿವರಗಳನ್ನು, ಸಂಪರ್ಕ ವಿವರಗಳನ್ನು, ವಿದ್ಯಾರ್ಹತೆಯನ್ನು, ಮೀಸಲಾತಿಗಳನ್ನು, ಪರೀಕ್ಷಾ ಕೇಂದ್ರವನ್ನು, Security Codeಗಳನ್ನು ಭರ್ತಿ ಮಾಡಿ Preview buttonಅನ್ನು Click ಮಾಡುವುದು.

3.2 Preview pageನಲ್ಲಿ Application I.D ಮತ್ತು Passwordಅನ್ನು Save ಮಾಡತಕ್ಕದ್ದು (ಅರ್ಜಿಯನ್ನು ಪೂರ್ಣವಾಗಿ ಭರ್ತಿ ಮಾಡಲು ಇವುಗಳು ಅಗತ್ಯವಿರುತ್ತದೆ). ಅರ್ಜಿಯಲ್ಲಿ ಏನಾದರೂ ಬದಲಾವಣೆಗಳನ್ನು ಮಾಡಬೇಕಾದಲ್ಲಿ Edit button ಮೇಲೆ Click ಮಾಡುವುದು. Edit ಅಗತ್ಯವಿಲ್ಲವಾದಲ್ಲಿ Print Challan buttonಅನ್ನು Click ಮಾಡಿ ಬ್ಯಾಂಕ್ ಚಲನ್‌ಅನ್ನು ಪ್ರಿಂಟ್ ತೆಗೆದುಕೊಳ್ಳುವುದು. ಶುಲ್ಕವನ್ನು ಸಿಂಡಿಕೇಟ್ ಬ್ಯಾಂಕ್‌ನಲ್ಲಿ ಮಾತ್ರ ಪಾವತಿಸುವುದು. ಬ್ಯಾಂಕಿನವರಿಗೆ ಚಲನ್‌ನಲ್ಲಿನ ಎಲ್ಲಾ ವಿವರಗಳನ್ನು ಸರಿಯಾಗಿ ಭರ್ತಿ ಮಾಡುವಂತೆ ತಿಳಿಸುವುದು.

3.3 ಅಭ್ಯರ್ಥಿಯ ಚಲನ್‌ನ ಪ್ರತಿಯನ್ನು ಮತ್ತು ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವನ್ನು, ಭಾವಚಿತ್ರದ ಕೆಳಗೆ ಸಹಿಯೊಂದಿಗೆ ನಿಗದಿತ ಅಳತೆ ಮತ್ತು ನಮೂನೆಯಲ್ಲಿ ಸ್ಕ್ಯಾನ್ ಮಾಡತಕ್ಕದ್ದು. ಈಗ Enter Journal No. and Upload Photo button ಮೇಲೆ Click ಮಾಡಿ ಬ್ಯಾಂಕಿನ ವಿವರಗಳನ್ನು ಭರ್ತಿ ಮಾಡುತ್ತಾ ಅರ್ಜಿಯನ್ನು ಪೂರ್ಣಗೊಳಿಸುವುದು. ಹಿಂದೆ ಬರೆದಿಟ್ಟುಕೊಂಡ Application I.D ಮತ್ತು Passwordಅನ್ನು ಉಪಯೋಗಿಸಿಕೊಳ್ಳುವುದು. ಎಲ್ಲಾ ಕ್ಷೇತ್ರಗಳನ್ನು ಅಂದರೆ Journal No., BIC (Bank Information Code), Fee paid date, Amount Paid ನಮೂದಿಸುವುದು. Scan ಮಾಡಿದ ಭಾವಚಿತ್ರವನ್ನು ಮತ್ತು ಬ್ಯಾಂಕ್ ಚಲನ್‌ಅನ್ನು Upload ಮಾಡಿ Update ಮಾಡುವುದು. ನಂತರ Submit button ಮೇಲೆ Click ಮಾಡುವುದು.

3.4 ಪಾಸ್‌ಪೋರ್ಟ್ ಅಳತೆಯ ಭಾವಚಿತ್ರದ ಕೆಳಗೆ ಸಹಿ ಮಾಡಿದ ಪ್ರತಿಯನ್ನು Scan ಮಾಡಿ Upload ಮಾಡುವುದು. ನಂತರ Submit button ಮೇಲೆ Click ಮಾಡುವುದು. ಭಾವಚಿತ್ರವನ್ನು ಬದಲಾಯಿಸಬೇಕಾದಲ್ಲಿ Edit button ಮೇಲೆ Click ಮಾಡುವುದು, ಇಲ್ಲದಿದ್ದಲ್ಲಿ Print Application ಮೇಲೆ Click ಮಾಡಿ ಎಲ್ಲಾ ಮಾಹಿತಿಗಳನ್ನೊಳಗೊಂಡಂತಹ ಪೂರ್ಣ ಅರ್ಜಿಯ ಪ್ರತಿಯನ್ನು ಪ್ರಿಂಟ್ ತೆಗೆದುಕೊಳ್ಳುವುದು. ಒಮ್ಮೆ ಪ್ರಿಂಟ್ ತೆಗೆದುಕೊಂಡಲ್ಲಿ ಮತ್ತೆ ಅರ್ಜಿಯನ್ನು Edit ಮಾಡಲು ಸಾಧ್ಯವಾಗುವುದಿಲ್ಲ.

**3.5 ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೆ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು.**

3.6 ಅರ್ಜಿಗಳನ್ನು **ದಿನಾಂಕ: 11–11–2011 ರಿಂದ 12–12–2011ರ** ಒಳಗಾಗಿ ಸಲ್ಲಿಸತಕ್ಕದ್ದು. ಈ ದಿನಾಂಕದ ನಂತರ On-line ಮೂಲಕ ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ. ಪರೀಕ್ಷಾ ಶುಲ್ಕವನ್ನು ದಿನಾಂಕ: **13–12–2011** ರವರೆಗೆ ಬ್ಯಾಂಕಿನ ವ್ಯವಹಾರದ ವೇಳೆಯಲ್ಲಿ ಪಾವತಿಸತಕ್ಕದ್ದು ಹಾಗೂ ದಿನಾಂಕ: **14–12–2011**ರ ಒಳಗೆ ಚಲನ್ ಮತ್ತು ಭಾವಚಿತ್ರವನ್ನು **Upload** ಮಾಡಿ ಸಂಪೂರ್ಣವಾಗಿ ಅರ್ಜಿಯನ್ನು ಭರ್ತಿ ಮಾಡತಕ್ಕದ್ದು.

**ವಿಶೇಷ ಸೂಚನೆ:** (1) On-line ಮೂಲಕ ಅರ್ಜಿಯನ್ನು ಭರ್ತಿಮಾಡುವ ಸಂದರ್ಭದಲ್ಲಿ ಯಾವುದಾದರೂ ತಾಂತ್ರಿಕ ತೊಂದರೆ ಅಥವಾ ಸಮಸ್ಯೆ ಎದುರಾದಲ್ಲಿ ಸಹಾಯವಾಣಿ (Help line) No.9900635146, 9900635149ನ್ನು ಬೆಳಗ್ಗೆ 8.00 ರಿಂದ ಮಧ್ಯಾಹ್ನ 1.00 ಗಂಟೆಯವರೆಗೆ ಹಾಗೂ ಮಧ್ಯಾಹ್ನ 2.00 ರಿಂದ ರಾತ್ರಿ 8.00 ರವರೆಗೆ ಸಂಪರ್ಕಿಸುವುದು ಹಾಗೂ 080–30574935ನ್ನು ಕಛೇರಿ ವೇಳೆಯಲ್ಲಿ ಸಂಪರ್ಕಿಸಿ ಅಗತ್ಯ ಮಾಹಿತಿ ಪಡೆದು ಅರ್ಜಿ ಸಲ್ಲಿಸಬಹುದು.

(2) On-line ಮೂಲಕ ಅರ್ಜಿಯನ್ನು ಸಲ್ಲಿಸಿದ ನಂತರ ಅರ್ಜಿಯ ಸ್ಥಾನಮಾನವನ್ನು ತಿಳಿಯಲು ñWelcome to On-line Application" ಪರದೆಯ ಮೇಲೆ ಮೂಡಿದ ನಂತರ ಅದರಲ್ಲಿ ñCheck Statusò ಎಂಬುದರ ಮೇಲೆ ñClickò ಮಾಡಿದರೆ, ಅರ್ಜಿಯು ಸ್ವೀಕೃತವಾಗಿರುವ ಬಗ್ಗೆ ಮಾಹಿತಿ ದೊರೆಯುವುದು, ಇದನ್ನು ಖಚಿತ ಪಡಿಸಿಕೊಳ್ಳತಕ್ಕದ್ದು.

**ಟಿಪ್ಪಣಿ:** ಅನುಬಂಧದಲ್ಲಿ ತಿಳಿಸಿರುವ ಹುದ್ದೆಗಳ ಸಂಖ್ಯೆ ಮತ್ತು ವರ್ಗೀಕರಣವು ಅನಿವಾರ್ಯ ಸಂದರ್ಭದಲ್ಲಿ ಬದಲಾವಣೆಗೆ ಒಳಪಟ್ಟಿರುತ್ತದೆ.

4. **ಪರೀಕ್ಷಾ ಶುಲ್ಕ:–**

ಸಾಮಾನ್ಯ ಅರ್ಹತೆ, ಪ್ರವರ್ಗ 2(ಎ), 2(ಬಿ), 3(ಎ), 3(ಬಿ) ಗೆ ಸೇರಿದ ಅಭ್ಯರ್ಥಿಗಳಿಗೆ ` 300/–ಗಳನ್ನು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, ಅಂಗವಿಕಲರು ಹಾಗೂ ಮಾಜಿ ಸೈನಿಕ ಅಭ್ಯರ್ಥಿಗಳು ` 25/–ನ್ನು ಕಡ್ಡಾಯವಾಗಿ ಪಾವತಿಸತಕ್ಕದ್ದು.

ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂತಿರುಗಿಸಲಾಗುವುದಿಲ್ಲ ಅಥವಾ ಅದನ್ನು ಆಯೋಗವು ನಡೆಸುವ ಇತರೆ ಪರೀಕ್ಷೆ ಅಥವಾ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ. ಶುಲ್ಕವನ್ನು ಸಂದಾಯ ಮಾಡದಿದ್ದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

4.1 **ದಿನಾಂಕ: 11–11–2011**ರಿಂದ ಅರ್ಜಿಗಳನ್ನು **ON LINE ಮೂಲಕ** ಭರ್ತಿ ಮಾಡಿ ಶುಲ್ಕವನ್ನು **ಸಿಂಡಿಕೇಟ್ ಬ್ಯಾಂಕಿನ ಎಲ್ಲಾ ಶಾಖೆಗಳಲ್ಲಿ,** ಬ್ಯಾಂಕ್ ವೇಳೆಯಲ್ಲಿ ಪಾವತಿಸಬಹುದು. ಸಿಂಡಿಕೇಟ್ ಬ್ಯಾಂಕಿನ ಶಾಖೆಗಳನ್ನು ಹೊರತುಪಡಿಸಿ ಇತರೇ ಬ್ಯಾಂಕ್/ಬ್ಯಾಂಕಿನ ಶಾಖೆಗಳಲ್ಲಿ ಶುಲ್ಕ ಸಂದಾಯ ಮಾಡಿದ್ದಲ್ಲಿ ಪಾವತಿಸಿದ ಶುಲ್ಕವನ್ನು ಪರಿಗಣಿಸಲಾಗುವುದಿಲ್ಲ ಹಾಗೂ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

5. **<u>ಅರ್ಹತಾ ಷರತ್ತುಗಳು:–</u>**

ಅ) ಭಾರತೀಯ ನಾಗರೀಕನಾಗಿರತಕ್ಕದ್ದು.

ಆ) ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿಯಿರುವ ವ್ಯಕ್ತಿಯನ್ನು ಮದುವೆಯಾಗಿರುವ ಮಹಿಳಾ ಅಭ್ಯಥಿಯು ಸರ್ಕಾರದಿಂದ ಪೂರ್ವಾನುಮತಿಯನ್ನು ಪಡೆಯದೇ ನೇಮಕಾತಿಗೆ ಅರ್ಹರಾಗುವುದಿಲ್ಲ.

ಇ) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.

ಈ) ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ರಾಜ್ಯ ಸರ್ಕಾರವು ಕಾದಿರಿಸಿಕೊಂಡಿದೆ ಮತ್ತು ಸರ್ಕಾರದ ವಿವೇಚನೆಯು ಯಾವುದೇ ವಿಧದಲ್ಲೂ ಈ ನಿಯಮಗಳ ಮೂಲಕ ಸೀಮಿತವಾಗಿರುವುದಿಲ್ಲ.

6. **<u>ಪರೀಕ್ಷೆಯ ಪ್ರಯತ್ನಗಳು</u> :–**

1997ರ ಗೆಜೆಟೆಡ್ ಪ್ರೊಬೇಷನರ್ಸ್ ನೇಮಕಾತಿ ನಿಯಮಗಳಡಿ ವಯೋಮಿತಿಯ ಷರತ್ತಿಗೊಳಪಟ್ಟು ಸಾಮಾನ್ಯ ಅಭ್ಯರ್ಥಿಗೆ ಈ ಪರೀಕ್ಷೆ ಬರೆಯಲು 5 ಬಾರಿ, ಇತರೆ ಹಿಂದುಳಿದ ವರ್ಗದ ಅಭ್ಯರ್ಥಿಗೆ 7 ಬಾರಿ ಮಾತ್ರ ಅವಕಾಶವಿರುತ್ತದೆ. ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಪ್ರಯತ್ನಗಳ ಮಿತಿ ಇರುವುದಿಲ್ಲ. ಪೂರ್ವಭಾವಿ ಪರೀಕ್ಷೆಯ ಪ್ರತಿಯೊಂದು ಪ್ರಯತ್ನವನ್ನು ಒಂದು ಅವಕಾಶವೆಂದು ಪರಿಗಣಿಸಲಾಗುವುದು.

7. **<u>ಪರೀಕ್ಷಾ ವಿಧಾನ:–</u>**

ಈ ಸ್ಪರ್ಧಾತ್ಮಕ ಪರೀಕ್ಷೆಯು ಗೆಜೆಟೆಡ್ ಪ್ರೊಬೇಷನರ್ಸ್‌ಗಳ ನೇಮಕಾತಿ (ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ನೇಮಕಾತಿ) ನಿಯಮ 1997ರ ಷೆಡ್ಯೂಲ್ 2 ರಲ್ಲಿ ತಿಳಿಸಿರುವಂತೆ ಎರಡು ಹಂತಗಳನ್ನು ಒಳಗೊಂಡಿರುತ್ತದೆ. ಹೆಚ್ಚಿನ ವಿವರಗಳಿಗೆ ನಿಯಮಗಳನ್ನು ನೋಡಲು ಸೂಚಿಸಿದೆ. **<u>ಈ ನಿಯಮಗಳು ಆಯೋಗದ ವೆಬ್‌ಸೈಟ್</u>**

**http://kpsc.kar.nic.in<u>ನಲ್ಲಿ ಲಭ್ಯವಿರುತ್ತದೆ.</u>**

ಪೂರ್ವಭಾವಿ ಪರೀಕ್ಷೆ (ಪ್ರಿಲಿಮಿನರಿ ಎಕ್ಸಾಮಿನೇಷನ್)–ಮುಖ್ಯ ಪರೀಕ್ಷೆಗೆ (ಮೈನ್ ಎಕ್ಸಾಮಿನೇಷನ್) ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ಸಲುವಾಗಿ.

ಮುಖ್ಯ ಪರೀಕ್ಷೆ (ಮೈನ್ ಎಕ್ಸಾಮಿನೇಷನ್) (ಲಿಖಿತ ಪರೀಕ್ಷೆ ಮತ್ತು ವ್ಯಕ್ತಿತ್ವ ಪರೀಕ್ಷೆ)–ಅಭ್ಯರ್ಥಿಗಳನ್ನು ವಿವಿಧ ಸೇವೆಗಳು ಮತ್ತು ಹುದ್ದೆಗಳಿಗೆ ಆಯ್ಕೆ ಮಾಡುವ ಸಲುವಾಗಿ.

**<u>ಪೂರ್ವಭಾವಿ ಪರೀಕ್ಷೆ</u>:–** ಪೂರ್ವಭಾವಿ ಪರೀಕ್ಷೆಯು ವಸ್ತುನಿಷ್ಠ (ಬಹು ಆಯ್ಕೆ) ಮಾದರಿಯ ಎರಡು ಪತ್ರಿಕೆಗಳನ್ನು ಒಳಗೊಂಡಿರುತ್ತದೆ.

(i) ಪ್ರತಿ ಪ್ರಶ್ನೆಗೆ ಎರಡು ಅಂಕಗಳಂತೆ ಪ್ರತಿ ಪತ್ರಿಕೆಯು 200 ಅಂಕಗಳದ್ದಾಗಿರುತ್ತದೆ.

(ii) ಪ್ರತಿ ಪತ್ರಿಕೆಯು ಗರಿಷ್ಠ 200 ಅಂಕಗಳದ್ದಾಗಿದ್ದು, ಎರಡು ಗಂಟೆಗಳ ಕಾಲಾವಧಿಯದ್ದಾಗಿರುತ್ತದೆ (ಎರಡು ಪತ್ರಿಕೆಗಳಿಗೆ ಒಟ್ಟು 400 ಅಂಕಗಳು).

ಪತ್ರಿಕೆಯ ವಿವರ ಈ ಕೆಳಕಂಡಂತಿರುತ್ತದೆ:–

| ಕ್ರಮ ಸಂಖ್ಯೆ | ವಿಷಯ | ಪ್ರಶ್ನೆಗಳ ಸಂಖ್ಯೆ | ಅಂಕಗಳು |
|---|---|---|---|
| | **ಪತ್ರಿಕೆ–1** | | |
| **1** | **ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಪ್ರಾಮುಖ್ಯತೆಯ ವಿಷಯಗಳನ್ನು ಒಳಗೊಂಡಂತೆ ಸಾಮಾನ್ಯ ಅಧ್ಯಯನ** | **40** | **80** |
| **2** | **ಮಾನವಿಕ ಶಾಸ್ತ್ರ** | **60** | **120** |
| | **ಒಟ್ಟು** | **100** | **200** |
| | **ಪತ್ರಿಕೆ–2** | | |
| **1** | **ರಾಜ್ಯದ ಪ್ರಾಮುಖ್ಯತೆಗೆ ಸಂಬಂಧಿಸಿದಂತೆ ಸಾಮಾನ್ಯ ಅಧ್ಯಯನ** | **40** | **80** |
| **2** | **ಸಾಮಾನ್ಯ ವಿಜ್ಞಾನ ಮತ್ತು ತಂತ್ರಜ್ಞಾನ, ಪರಿಸರ ಮತ್ತು ಪರಿಸರ ವಿಜ್ಞಾನ** | **30** | **60** |
| **3** | **ಸಾಮಾನ್ಯ ಮನೋಸಾಮರ್ಥ್ಯ** | **30** | **60** |
| | **ಒಟ್ಟು** | **100** | **200** |

**<u>ಟಿಪ್ಪಣಿ:–</u>**

**(ಅ) ಪ್ರಶ್ನೆ ಪತ್ರಿಕೆಯು ಕನ್ನಡ ಮತ್ತು ಇಂಗ್ಲೀಷ್ ಭಾಷೆಗಳೆರಡರಲ್ಲೂ ಇರುತ್ತದೆ.**

**(ಆ) ಪೂರ್ವಭಾವಿ ಪರೀಕ್ಷೆಯಲ್ಲಿನ ಸಾಮಾನ್ಯ ಮನೋ(ಬೌದ್ಧಿಕ)ಸಾಮರ್ಥ್ಯದ ಪ್ರಶ್ನೆಗಳ ಮಟ್ಟವು ಎಸ್‌ಎಸ್‌ಎಲ್‌ಸಿ / 10ನೇ ತರಗತಿಯ ಮಟ್ಟದ್ದಾಗಿರುತ್ತದೆ ಮತ್ತು ಉಳಿದ ಪತ್ರಿಕೆಗಳು ಪದವಿ ಮಟ್ಟದ್ದಾಗಿರುತ್ತವೆ.**

**(ಇ) ಪ್ರಕಟಿತ ರಿಕ್ತ ಸ್ಥಾನಗಳಿಗೆ ಅನುಗುಣವಾಗಿ 20ರಷ್ಟು ಪ್ರಮಾಣದಲ್ಲಿ ಜಾರಿಯಲ್ಲಿರುವ ಮೀಸಲಾತಿ ನೀತಿಯನ್ವಯ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಇತರೆ ಹಿಂದುಳಿದ ವರ್ಗಗಳು ಮತ್ತು ಸಾಮಾನ್ಯ ವರ್ಗಕ್ಕೆ ಸೇರಿದ ಸಾಕಷ್ಟು ಅಭ್ಯರ್ಥಿಗಳನ್ನು ಅದೇ ಅನುಪಾತದಲ್ಲಿ ಪೂರ್ವಭಾವಿ ಪರೀಕ್ಷೆಯಲ್ಲಿ ಅಭ್ಯರ್ಥಿಯು ಗಳಿಸಿದ ಅಂಕಗಳ ಆಧಾರದ ಮೇಲೆ ಮುಖ್ಯ ಪರೀಕ್ಷೆಗೆ ಪ್ರವೇಶ ನೀಡಬಹುದಾಗಿರುತ್ತದೆ.**

## ಪರೀಕ್ಷೆಯ ಪಠ್ಯಕ್ರಮ

### 7.1 ಪೂರ್ವಭಾವಿ ಪರೀಕ್ಷೆ: (ವಸ್ತುನಿಷ್ಠ ಮಾದರಿ)

### ಪತ್ರಿಕೆ–1

(i) ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಮಹತ್ವದ ಪ್ರಚಲಿತ ವಿದ್ಯಮಾನಗಳು.

(ii) ಮಾನವಿಕ ಶಾಸ್ತ್ರ–ಭಾರತದ ಇತಿಹಾಸ–ಕರ್ನಾಟಕವನ್ನು ಪ್ರಾಮುಖ್ಯವಾಗಿರಿಸಿಕೊಂಡು ಭಾರತದ ರಾಷ್ಟ್ರೀಯ ಚಳುವಳಿಗೆ ಹೆಚ್ಚಿನ ಗಮನ ನೀಡಿ ಸಾಮಾಜಿಕ, ಆರ್ಥಿಕ, ಸಾಂಸ್ಕೃತಿಕ ಮತ್ತು ರಾಜಕೀಯವಾಗಿ ಇತಿಹಾಸ ವಿಷಯದ ಬಗ್ಗೆ ಅಭ್ಯರ್ಥಿಯ ವಿಸ್ತಾರವಾದ ಸಾಮಾನ್ಯ ತಿಳುವಳಿಕೆ.

(iii) ಕರ್ನಾಟಕದ ಬಗ್ಗೆ ಹೆಚ್ಚಿನ ಗಮನ ನೀಡುವುದರೊಂದಿಗೆ ಜಾಗತಿಕ ಭೂಗೋಳ ಶಾಸ್ತ್ರ ಮತ್ತು ಭಾರತದ ಭೂಗೋಳ ಶಾಸ್ತ್ರ.

(iv) ದೇಶದ ರಾಜಕೀಯ ವ್ಯವಸ್ಥೆ, ಗ್ರಾಮೀಣಾಭಿವೃದ್ಧಿ, ಭಾರತದ ನಿರಂತರ ಅಭಿವೃದ್ಧಿಗೆ ಯೋಜನೆ ಮತ್ತು ಆರ್ಥಿಕ ಸುಧಾರಣೆಗಳು, ಬಡತನ ನಿರ್ಮೂಲನೆ, ಜನಸಂಖ್ಯಾಶಾಸ್ತ್ರ, ಸಾಮಾಜಿಕ ಬದಲಾವಣೆಗಳನ್ನು ಒಳಗೊಂಡಂತೆ ಭಾರತದ ರಾಜಕೀಯ ಮತ್ತು ಆರ್ಥಿಕ ವ್ಯವಸ್ಥೆ.

### ಪತ್ರಿಕೆ–2

(i) ರಾಜ್ಯದ ಪ್ರಾಮುಖ್ಯತೆಯ ಪ್ರಸ್ತುತ ಘಟನೆಗಳು ಮತ್ತು ರಾಜ್ಯ ಸರ್ಕಾರದ ಪ್ರಮುಖ ಯೋಜನೆಗಳು.

(ii) ಸಾಮಾನ್ಯ ವಿಜ್ಞಾನ ಮತ್ತು ತಂತ್ರಜ್ಞಾನ, ಪರಿಸರ ಮತ್ತು ಪರಿಸರ ವಿಜ್ಞಾನ– ವಿಷಯದಲ್ಲಿ ಪ್ರಾವೀಣ್ಯತೆ ಬೇಕಾಗಿಲ್ಲದೆ ಆರೋಗ್ಯ, ಪರಿಸರ ವಿಜ್ಞಾನ, ಜೈವಿಕ ವೈವಿಧ್ಯತೆ ಮತ್ತು ಹವಾಮಾನದಲ್ಲಿ ಬದಲಾವಣೆಗಳು ಇವುಗಳನ್ನೊಳಗೊಂಡಂತೆ ಯಾವುದೇ ವಿಜ್ಞಾನ ವಿಷಯವನ್ನು ವಿಶೇಷವಾಗಿ ಅಧ್ಯಯನ ಮಾಡದಿರುವ ಒಬ್ಬ ಸುಶಿಕ್ಷಿತ ವ್ಯಕ್ತಿಯಿಂದ ನಿರೀಕ್ಷೆ ಮಾಡುವಂತೆ ವಿಜ್ಞಾನ ಮತ್ತು ತಂತ್ರಜ್ಞಾನದಲ್ಲಿ ದೈನಂದಿನ ಅನುಭವಗಳು / ಅವಲೋಕನೆಗಳು / ಪರಿಣಾಮಗಳು ಮತ್ತು ವಿಜ್ಞಾನ ಮತ್ತು ತಂತ್ರಜ್ಞಾನದಲ್ಲಿ ಸಮಕಾಲೀನ ಬೆಳವಣಿಗೆಗಳು.

(iii) ಸಾಮಾನ್ಯ ಮನೋಸಾಮರ್ಥ್ಯ– ಮನೋಶಕ್ತಿ, ಗ್ರಹಿಸುವಿಕೆ, ತಾರ್ಕಿಕ ಪ್ರತಿಪಾದನೆ ಮತ್ತು ವಿಶ್ಲೇಷಣಾ ಸಾಮರ್ಥ್ಯ, ನಿರ್ಧಾರ ತೆಗೆದುಕೊಳ್ಳುವಿಕೆ, ಸಮಸ್ಯೆ ಬಿಡಿಸುವಿಕೆ, ಮೂಲ ಗಣಿತ ಜ್ಞಾನ (ಸಂಖ್ಯೆಗಳು ಮತ್ತು ಅವುಗಳ ಸಂಬಂಧಗಳು, ಅವುಗಳ ಪರಿಮಾಣ ಇತ್ಯಾದಿ) ಮತ್ತು ದತ್ತಾಂಶದ ವ್ಯಾಖ್ಯಾನ (ನಕ್ಷೆಗಳು, ರೇಖಾಚಿತ್ರಗಳು, ಕೋಷ್ಟಕಗಳು, ದತ್ತಾಂಶ ದಕ್ಷತೆ, ಇತ್ಯಾದಿ– ಹತ್ತನೇ ತರಗತಿ / ಎಸ್.ಎಸ್.ಎಲ್.ಸಿ ಪರೀಕ್ಷೆ ಮಟ್ಟದಲ್ಲಿ).

# PRELIMINARY EXAMINATION

**The competitive examination shall comprise of two stages:-**

(A) Preliminary Examination (Objective type) for the selection of candidates for the main examination and
(B) Main Examination (written examination and Personality Test) for selection for candidates for various services and posts.

**(A)Preliminary Examination** :- The Preliminary Examination shall consist of two papers of objective type (multiple choice).

(i) Each paper carrying 100 Questions with each question carrying two marks.

(ii) Each paper shall be of a maximum of 200 marks and a duration of two hours (Total for two papers 400 Marks) in the following description, namely:-

| Sl. No. | Subject Area | No. of Questions | Marks |
|---|---|---|---|
| | PAPER - I | | |
| 1 | General Studies related to National and International importance | 40 | 80 |
| 2 | Humanities | 60 | 120 |
| | Total | 100 | 200 |
| | PAPER - II | | |
| 1 | General Studies related to State Importance | 40 | 80 |
| 2 | General Science & Tech, Environment & Ecology | 30 | 60 |
| 3 | General Mental Ability | 30 | 60 |
| | Total | 100 | 200 |

***Note: -***

1. ***The question paper shall be set both in Kannada and English.***
2. ***The standard of General Mental Ability questions of preliminary examination (aptitude test) shall be that of X / SSLC level and the remaining papers are that of Degree Level.***
3. **The number of candidates to be admitted to the main examination shall be 20 times the vacancies notified for recruitment in the order of merit on the basis of the performance in the preliminary examination, subject to accommodating the same ratio in adequate number of candidates belonging to the categories of Scheduled Castes , Scheduled Tribes, each of the other Backward Classes and others.**

## SYLLABUS FOR THE EXAMINATION

***1. PRELIMINARY EXAMINATION (Objective type):***

***PAPER – 1,***

(i) Current events of National and International importance.

(ii) Humanities - History of India ï Emphasis shall be on broad general understanding of the subject in its social, economic, cultural and political aspects with a focus on Indian national movement with special emphasis on Karnataka.

(iii) World Geography and Geography of India with a focus on Karnataka.

(iv) Indian Polity and economy, including the countryõs political system, rural development, planning and economic reforms in India-sustainable development, poverty alleviation, demographics, social sector initiatives etc.,

***PAPER –2***

(i) Current events of State importance and important State Govt. programmes.

(ii) General Science & Technology, Environment & Ecology ï contemporary developments in science and technology, and their implications including matters of everyday observations and experience, as may be expected of a well-educated person who has not made a special study of any scientific discipline, general issues on Health, environmental ecology, biodiversity, and climate change- that do not require subject specialisation.

(iii) General Mental Ability ï Comprehension, Logical reasoning and Analytical ability, Decision making, problem solving, Basic innumeracy (numbers and their relations, order of magnitude etc.,) and data interpretation ( charts, graphs, tables, data sufficiency etc., (class X / SSLC level).

7.2 **ಮುಖ್ಯ ಪರೀಕ್ಷೆ:–**

**ಮುಖ್ಯ ಪರೀಕ್ಷೆಯು ಆರು ಪತ್ರಿಕೆಗಳನ್ನೊಳಗೊಂಡಿರುತ್ತದೆ:–**

| | | |
|---|---|---|
| ಪತ್ರಿಕೆ 1 | ಕಡ್ಡಾಯ ಕನ್ನಡ | 150 ಅಂಕಗಳು |
| ಪತ್ರಿಕೆ 2 | ಕಡ್ಡಾಯ ಅಂಗ್ಲಭಾಷೆ | 150 ಅಂಕಗಳು |
| ಪತ್ರಿಕೆ–3 ಮತ್ತು ಪತ್ರಿಕೆ–4 | ಸಾಮಾನ್ಯ ಅಧ್ಯಯನ ಪತ್ರಿಕೆ 1<br>ಸಾಮಾನ್ಯ ಅಧ್ಯಯನ ಪತ್ರಿಕೆ 2 | 300 ಅಂಕಗಳು<br>300 ಅಂಕಗಳು |
| ಪತ್ರಿಕೆ–5,6,7 ಮತ್ತು 8 | 30 ಐಚ್ಛಿಕ ವಿಷಯಗಳಲ್ಲಿ ಯಾವುದಾದರೂ ಎರಡು ವಿಷಯಗಳನ್ನು ಆಯ್ಕೆ ಮಾಡಿಕೊಳ್ಳಬೇಕು. ಪ್ರತಿ ವಿಷಯದಲ್ಲಿ ಎರಡು ಪತ್ರಿಕೆಗಳಿರುತ್ತವೆ. | ಪ್ರತಿ ಪತ್ರಿಕೆಗೂ 300 ಅಂಕಗಳು |
| | **ಲಿಖಿತ ಪರೀಕ್ಷೆಯ ಒಟ್ಟು ಅಂಕಗಳು** | **2100** |

**ಅಭ್ಯರ್ಥಿಗಳಿಗೆ ಯಾವುದೇ ಸಂದರ್ಭದಲ್ಲಿ ಮುಖ್ಯ ಪರೀಕ್ಷೆಯ ಅರ್ಜಿಯಲ್ಲಿ ಕೋರಿರುವ ಐಚ್ಛಿಕ ವಿಷಯವನ್ನು ಬದಲಾವಣೆ ಮಾಡಿಕೊಳ್ಳಲು ಅವಕಾಶವಿರುವುದಿಲ್ಲ.**

## ಐಚ್ಛಿಕ ವಿಷಯಗಳು

| **ಐಚ್ಛಿಕ ವಿಷಯ** | **ಸಂಕೇತ ಸಂಖ್ಯೆ** |
|---|---|
| ಕೃಷಿ, ಕೃಷಿ ಮಾರುಕಟ್ಟೆ ಸಹಕಾರ ಮತ್ತು ರೇಷ್ಮೆ | 01 |
| ಪಶು ಸಂಗೋಪನೆ ಮತ್ತು ಪಶುವೈದ್ಯ ವಿಜ್ಞಾನ ಮತ್ತು ಮೀನುಗಾರಿಕೆ | 02 |
| ಸಸ್ಯಶಾಸ್ತ್ರ | 03 |
| ರಸಾಯನಶಾಸ್ತ್ರ | 04 |
| ಸಿವಿಲ್ ಇಂಜಿನಿಯರಿಂಗ್ | 05 |
| ವಾಣಿಜ್ಯಶಾಸ್ತ್ರ | 06 |
| ಅಪರಾಧಶಾಸ್ತ್ರ | 07 |
| ಅರ್ಥಶಾಸ್ತ್ರ | 08 |
| ಎಲೆಕ್ಟ್ರಿಕಲ್ ಇಂಜಿನಿಯರಿಂಗ್ | 09 |
| ಭೂಗೋಳಶಾಸ್ತ್ರ | 10 |
| ಕಾನೂನು | 11 |
| ಗಣಿತಶಾಸ್ತ್ರ | 12 |
| ಇತಿಹಾಸ | 13 |
| ಮೆಕ್ಯಾನಿಕಲ್ ಇಂಜಿನಿಯರಿಂಗ್ | 14 |
| ತತ್ವಶಾಸ್ತ್ರ | 15 |
| ಭೂವಿಜ್ಞಾನ | 16 |
| ಭೌತಶಾಸ್ತ್ರ | 17 |
| ರಾಜ್ಯಶಾಸ್ತ್ರ ಮತ್ತು ಅಂತರರಾಷ್ಟ್ರೀಯ ಸಂಬಂಧಗಳು | 18 |
| ಮನೋವಿಜ್ಞಾನ | 19 |
| ಸಾರ್ವಜನಿಕ ಆಡಳಿತ | 20 |
| ಸಮಾಜಶಾಸ್ತ್ರ | 21 |
| ಸಂಖ್ಯಾಶಾಸ್ತ್ರ | 22 |
| ಪ್ರಾಣಿಶಾಸ್ತ್ರ | 23 |
| ಗ್ರಾಮೀಣಾಭಿವೃದ್ಧಿ ಮತ್ತು ಸಹಕಾರ | 24 |
| ಹಿಂದಿ | 25 |
| ಮಾನವಶಾಸ್ತ್ರ | 26 |
| ಉರ್ದು | 27 |
| ಕನ್ನಡ | 28 |
| ಇಂಗ್ಲೀಷ್ | 29 |
| ಮ್ಯಾನೇಜ್‌ಮೆಂಟ್ | 30 |

**ಸೂಚನೆ:– <u>ಅಭ್ಯರ್ಥಿಗಳು ಈ ಕೆಳಗೆ ಸೂಚಿಸಿರುವ ಗುಂಪುಗಳ ಕಾಂಬಿನೇಷನ್‌ಗಳಲ್ಲಿ ಒಂದಕ್ಕಿಂತ ಹೆಚ್ಚು ವಿಷಯವನ್ನು ಆರಿಸಿಕೊಳ್ಳಬಾರದು ಹಾಗೇನಾದರೂ ಆಯ್ಕೆ ಮಾಡಿಕೊಂಡಲ್ಲಿ ಅಂತಹವರ ಅರ್ಜಿಯನ್ನು ತಿರಸ್ಕರಿಸಲಾಗುವುದು.</u>**

- ರಾಜ್ಯಶಾಸ್ತ್ರ ಮತ್ತು ಅಂತರ ರಾಷ್ಟ್ರೀಯ ಸಂಬಂಧಗಳು / ಸಾರ್ವಜನಿಕ ಆಡಳಿತ
- ವಾಣಿಜ್ಯಶಾಸ್ತ್ರ ಮತ್ತು ಅಕೌಂಟೆನ್ಸಿ / ಮ್ಯಾನೇಜ್‌ಮೆಂಟ್
- ಮಾನವಶಾಸ್ತ್ರ / ಸಮಾಜಶಾಸ್ತ್ರ
- ಗಣಿತಶಾಸ್ತ್ರ / ಸಂಖ್ಯಾಶಾಸ್ತ್ರ
- ಕೃಷಿ, ಕೃಷಿ ಮಾರುಕಟ್ಟೆ ಸಹಕಾರ ಮತ್ತು ರೇಷ್ಮೆ / ಪಶು ಸಂಗೋಪನೆ ಮತ್ತು ಪಶುವೈದ್ಯ ವಿಜ್ಞಾನ ಮತ್ತು ಮೀನುಗಾರಿಕೆ.
- ಸಿವಿಲ್ ಇಂಜಿನಿಯರಿಂಗ್/ಎಲೆಕ್ಟ್ರಿಕಲ್ ಇಂಜಿನಿಯರಿಂಗ್/ಮೆಕ್ಯಾನಿಕಲ್ ಇಂಜಿನಿಯರಿಂಗ್.
- ಅರ್ಥಶಾಸ್ತ್ರ / ಗ್ರಾಮೀಣಾಭಿವೃದ್ಧಿ ಮತ್ತು ಸಹಕಾರ
- ಕೃಷಿ, ಕೃಷಿ ಮಾರುಕಟ್ಟೆ ಸಹಕಾರ ಮತ್ತು ರೇಷ್ಮೆ / ಗ್ರಾಮೀಣಾಭಿವೃದ್ಧಿ ಮತ್ತು ಸಹಕಾರ
- ಹಿಂದಿ/ಉರ್ದು/ಕನ್ನಡ/ಇಂಗ್ಲೀಷ್ ಭಾಷೆಗಳು.

**<u>ಟಿಪ್ಪಣಿ</u>:–**

(1) ಮುಖ್ಯ ಪರೀಕ್ಷೆಯು ವಿವರಣಾತ್ಮಕ ಮಾದರಿಯಲ್ಲಿರುತ್ತದೆ.

(2) ಮುಖ್ಯ ಪರೀಕ್ಷೆಯ (ಪತ್ರಿಕೆ–1 ಕಡ್ಡಾಯ ಕನ್ನಡ ಹಾಗೂ ಪತ್ರಿಕೆ–2 ಕಡ್ಡಾಯ ಆಂಗ್ಲಭಾಷೆ) ಪತ್ರಿಕೆಗಳು ಎಸ್.ಎಸ್.ಎಲ್.ಸಿಯ ಪ್ರಥಮ ಭಾಷೆಯ ಮಟ್ಟದ್ದಾಗಿರುತ್ತದೆ. ಮುಖ್ಯ ಪರೀಕ್ಷೆಯ ಇನ್ನಿತರ ವಿಷಯಗಳ ಪತ್ರಿಕೆಗಳು ಪದವಿ ಮಟ್ಟದ್ದಾಗಿರುತ್ತದೆ.

(3) ಕಡ್ಡಾಯ ಕನ್ನಡ ಮತ್ತು ಇಂಗ್ಲೀಷ್ ಪತ್ರಿಕೆಗಳಲ್ಲಿ ಪಡೆದ ಅಂಕಗಳು ಅರ್ಹತಾದಾಯಕ ಸ್ವರೂಪದ್ದಾಗಿರುತ್ತವೆ. ಅರ್ಹತೆ ಪಡೆಯಲು ಈ ಪ್ರತಿಯೊಂದು ಪತ್ರಿಕೆಯಲ್ಲಿ ಕನಿಷ್ಠ ಶೇಕಡ 30 ಮತ್ತು ಸರಾಸರಿ ಶೇಕಡ 35 ಅಂಕಗಳನ್ನು ನಿಗದಿಪಡಿಸಲಾಗಿದೆ. ಈ ಎರಡೂ ಪತ್ರಿಕೆಗಳಲ್ಲಿ ಗಳಿಸಿದ ಅಂಕಗಳನ್ನು ಅಭ್ಯರ್ಥಿಗಳ ಆಯ್ಕೆಯ ಅರ್ಹತೆಯನ್ನು ನಿಗದಿಪಡಿಸುವಲ್ಲಿ ಪರಿಗಣಿಸಲಾಗುವುದಿಲ್ಲ. ಈ ಎರಡು ಪತ್ರಿಕೆಗಳಲ್ಲಿ ನಿಗದಿತ ಅಂಕಗಳನ್ನು ಗಳಿಸದ ಅಭ್ಯರ್ಥಿಗಳು ಐಚ್ಛಿಕ ವಿಷಯಗಳಲ್ಲಿ ಎಷ್ಟೇ ಹೆಚ್ಚು ಅಂಕಗಳನ್ನು ಗಳಿಸಿದ್ದರೂ ವ್ಯಕ್ತಿತ್ವ ಪರೀಕ್ಷೆಗೆ ಅರ್ಹರಾಗುವುದಿಲ್ಲ ಹಾಗೂ ಇಂತಹ ಅಭ್ಯರ್ಥಿಗಳ ಇತರೆ ವಿಷಯಗಳಲ್ಲಿ ಪಡೆದ ಅಂಕಗಳನ್ನು ಪ್ರಕಟಿಸುವುದಿಲ್ಲ.

ಅಭ್ಯರ್ಥಿಗಳು ಆಯ್ಕೆಮಾಡಿಕೊಂಡಿರುವ ಎಲ್ಲಾ ಪತ್ರಿಕೆಗಳಿಗೆ ಕಡ್ಡಾಯವಾಗಿ ಹಾಜರಾಗಬೇಕು. ಯಾವುದೇ ಒಂದು ಪತ್ರಿಕೆಗೆ ಗೈರುಹಾಜರಾದರೂ ಸಹ ಉಳಿದ ಪತ್ರಿಕೆಗಳಲ್ಲಿ ಪಡೆದ ಅಂಕಗಳನ್ನು ಪ್ರಕಟಿಸುವುದಿಲ್ಲ ಹಾಗೂ ಉಳಿದ ಪತ್ರಿಕೆಗಳಲ್ಲಿ ಎಷ್ಟೇ ಅಂಕಗಳನ್ನು ಗಳಿಸಿದ್ದರೂ ಸಹ ವ್ಯಕ್ತಿತ್ವ ಪರೀಕ್ಷೆಗೆ ಅರ್ಹರಾಗುವುದಿಲ್ಲ.

**ಮುಖ್ಯ ಪರೀಕ್ಷೆಯ ಪಠ್ಯಕ್ರಮವನ್ನು (Syllabus) ಆಯೋಗದ ವೆಬ್‌ಸೈಟ್ "<u>http://kpsc.kar.nic.in</u>" ನಲ್ಲಿ ಪ್ರಕಟಿಸಲಾಗಿದ್ದು, ಇದನ್ನು ಡೌನ್‌ಲೋಡ್ ಮಾಡಿಕೊಳ್ಳಬಹುದು.**

- **<u>ವ್ಯಕ್ತಿತ್ವ ಪರೀಕ್ಷೆ</u>:–** ಆಯೋಗವು ನಿಯಮಾನುಸಾರ ನಡೆಸುವ ಮುಖ್ಯ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಜೇಷ್ಠತೆ ಮತ್ತು ಕಾಲಕಾಲಕ್ಕೆ ಚಾಲ್ತಿಯಲ್ಲಿರುವ ನಿಯಮಗಳನುಸಾರ ಇರುವ ಮೀಸಲಾತಿಯನ್ವಯ ಪ್ರಕಟಿಸಲಾದ ಖಾಲಿ ಹುದ್ದೆಗಳ ಸಂಖ್ಯೆಗೆ ಅನುಗುಣವಾಗಿ 1:3ರ ಪ್ರಮಾಣದಲ್ಲಿ ಅಭ್ಯರ್ಥಿಗಳನ್ನು ವ್ಯಕ್ತಿತ್ವ ಪರೀಕ್ಷೆಗೆ ಪರಿಗಣಿಸಲಾಗುವುದು. ವ್ಯಕ್ತಿತ್ವ ಪರೀಕ್ಷೆಗೆ 200 ಅಂಕಗಳನ್ನು ನಿಗದಿಪಡಿಸಲಾಗಿದೆ.

- **<u>ಅಭ್ಯರ್ಥಿಗಳ ಆಯ್ಕೆ ಪಟ್ಟಿ</u> :** ಆಯೋಗವು, ಅಭ್ಯರ್ಥಿಗಳು ಲಿಖಿತ ಪರೀಕ್ಷೆ (ಮುಖ್ಯ ಪರೀಕ್ಷೆ) ಮತ್ತು ವ್ಯಕ್ತಿತ್ವ ಪರೀಕ್ಷೆಯಲ್ಲಿ ಪಡೆದ ಒಟ್ಟು ಅಂಕಗಳ ಜೇಷ್ಠತೆ ಹಾಗೂ ಅರ್ಜಿಯಲ್ಲಿ ನಮೂದಿಸಿರುವ ಹುದ್ದೆಗಳ ಆದ್ಯತೆಯ ಆಧಾರದ ಮೇಲೆ ಹಾಗೂ ಚಾಲ್ತಿಯಲ್ಲಿರುವ ಮೀಸಲಾತಿಯನ್ವಯ ಲಭ್ಯವಿರುವ ಹುದ್ದೆಗಳಲ್ಲಿ ಪರಿಶಿಷ್ಠ ಜಾತಿ, ಪರಿಶಿಷ್ಠ ಪಂಗಡ, ಇತರೆ ಹಿಂದುಳಿದ ವರ್ಗಗಳು ಮತ್ತು ಇತರರಿಂದ ಆಯ್ಕೆ ಮಾಡಲಾಗುವುದು.

**7.3 ಪರೀಕ್ಷಾ ಕೇಂದ್ರಗಳು:**

1. **ಬೆಂಗಳೂರು**
2. **ಮೈಸೂರು**
3. **ಧಾರವಾಡ**
4. **ಗುಲ್ಬರ್ಗಾ**
5. **ಶಿವಮೊಗ್ಗ**

**ಅಭ್ಯರ್ಥಿಗಳು ಅರ್ಜಿಯಲ್ಲಿ ಅವರು ಪೂರ್ವಭಾವಿ ಪರೀಕ್ಷೆ ತೆಗೆದುಕೊಳ್ಳಲು ಇಚ್ಛಿಸುವ ಕೇಂದ್ರವನ್ನು ನಮೂದಿಸತಕ್ಕದ್ದು. ಪರೀಕ್ಷಾ ಕೇಂದ್ರವನ್ನು ನಿಗದಿಪಡಿಸುವುದು ಆಯೋಗದ ಅಂತಿಮ ತೀರ್ಮಾನವಾಗಿರುತ್ತದೆ. ಪರೀಕ್ಷೆಗಳ ದಿನಾಂಕವನ್ನು ಮುಂದೆ ಜಾಹೀರಾತು ಪಡಿಸಲಾಗುವುದು ಹಾಗೂ ಆಯೋಗದ ವೆಬ್ ಸೈಟ್ "http://kpsc.kar.nic.in" ನಲ್ಲಿ ಬಿತ್ತರಿಸಲಾಗುವುದು. ಪರೀಕ್ಷೆಗಳ ದಿನಾಂಕಗಳನ್ನು ಅಧಿಸೂಚಿಸಿದಾಗ ಪ್ರವೇಶ ಪತ್ರಗಳನ್ನು ಆಯೋಗದ ಅಂತರ್ಜಾಲದಿಂದ ಅಭ್ಯರ್ಥಿಗಳು ಡೌನ್ ಲೋಡ್ ಮಾಡಿಕೊಳ್ಳಬೇಕು. ಅಭ್ಯರ್ಥಿಗಳಿಗೆ ಪ್ರವೇಶ ಪತ್ರಗಳನ್ನು ಆಯೋಗದ ಕಛೇರಿಯಿಂದ ಪ್ರತ್ಯೇಕವಾಗಿ ರವಾನಿಸಲಾಗುವುದಿಲ್ಲ.**

## 8. ಶೈಕ್ಷಣಿಕ ವಿದ್ಯಾರ್ಹತೆ ಹಾಗೂ ದೈಹಿಕ ದೇಹದಾರ್ಢ್ಯತೆ:

### 8.1. ಶೈಕ್ಷಣಿಕ ವಿದ್ಯಾರ್ಹತೆ:

ಅಭ್ಯರ್ಥಿಯು ಭಾರತದಲ್ಲಿ ಕಾನೂನು ರೀತ್ಯಾ ಸ್ಥಾಪಿತವಾದ ಯಾವುದೇ ವಿಶ್ವ ವಿದ್ಯಾಲಯದ ಸ್ನಾತಕ/ಸ್ನಾತಕೋತ್ತರ ಪದವಿಯನ್ನು ಹೊಂದಿರತಕ್ಕದ್ದು ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಹೊಂದಿರತಕ್ಕದ್ದು. ಪರಂತು, ಅಭ್ಯರ್ಥಿಗಳು ಯಾವುದಾದರೂ ಪರೀಕ್ಷೆಗೆ ಹಾಜರಾಗಿದ್ದಲ್ಲಿ ಮತ್ತು ಆ ಪರೀಕ್ಷೆಯಲ್ಲಿ ಉತ್ತೀರ್ಣರಾದಲ್ಲಿ ಆಯೋಗವು ನಡೆಸುವ ಪೂರ್ವಭಾವಿ ಪರೀಕ್ಷೆಗೆ ಶೈಕ್ಷಣಿಕವಾಗಿ ಅರ್ಹರಾಗುವುದಾದಲ್ಲಿ, ಆದರೆ ಆ ಪರೀಕ್ಷೆಯ ಫಲಿತಾಂಶ ಪ್ರಕಟಗೊಳ್ಳದೇ ಇದ್ದಲ್ಲಿ, ಅಂತಹ ಅಭ್ಯರ್ಥಿಗಳು ಪೂರ್ವಭಾವಿ ಪರೀಕ್ಷೆಗೆ ಪ್ರವೇಶ ಪಡೆಯಲು ಅರ್ಹರಾಗುತ್ತಾರೆ.

ಗೆಜೆಟೆಡ್ ಪ್ರೊಬೆಷನರುಗಳ ಮುಖ್ಯ ಪರೀಕ್ಷೆಯನ್ನು ತೆಗೆದುಕೊಳ್ಳಬಹುದೆಂದು ಆಯೋಗವು ಘೋಷಿಸಿದ ಅರ್ಹರಾದ ಎಲ್ಲಾ ಅಭ್ಯರ್ಥಿಗಳು ಮುಖ್ಯ ಪರೀಕ್ಷೆಗೆ ಅರ್ಜಿ ಸಲ್ಲಿಸುವಾಗ ಸಂಬಂಧಿಸಿದ ವಿದ್ಯಾರ್ಹತೆ ಪರೀಕ್ಷೆಯನ್ನು ಪಾಸು ಮಾಡಿರುವ ಬಗ್ಗೆ ಸಾಕ್ಷ್ಯಾಧಾರವನ್ನು ಒದಗಿಸತಕ್ಕದ್ದು, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳಿಗೆ ಮುಖ್ಯ ಪರೀಕ್ಷೆಗೆ ಪ್ರವೇಶ ನೀಡುವುದಿಲ್ಲ. ಪರಂತು, ಅಭ್ಯರ್ಥಿಗಳು ಗೆಜೆಟೆಡ್ ಪ್ರೊಬೆಷನರುಗಳ ಮುಖ್ಯ ಪರೀಕ್ಷೆಗೆ ಅರ್ಜಿ ಸಲ್ಲಿಸುವಾಗ ಅವರುಗಳು ವೃತ್ತಿ ಶಿಕ್ಷಣದ ಅಂತಿಮ ಪರೀಕ್ಷೆಯಲ್ಲಿ ಉತ್ತೀರ್ಣರಾಗಿದ್ದಲ್ಲಿ ಅಥವಾ ಇತರೆ ವೈದ್ಯಕೀಯ ಶಿಕ್ಷಣ ಪರೀಕ್ಷೆಯಲ್ಲಿ ಉತ್ತೀರ್ಣರಾಗಿದ್ದು, ಆದರೆ ಪ್ರಶಿಕ್ಷಣಾವಧಿಯನ್ನು ಪೂರೈಸದೇ ಇದ್ದಲ್ಲಿ, ಅಂತಹ ಅಭ್ಯರ್ಥಿಗಳಿಗೆ ತಾತ್ಕಾಲಿಕವಾಗಿ ಪರೀಕ್ಷೆಗೆ ಪ್ರವೇಶ ನೀಡಲಾಗುವುದು. ಆದರೆ, ಅವರುಗಳು ಅರ್ಜಿಯ ಜೊತೆಯಲ್ಲಿ ವಿಶ್ವವಿದ್ಯಾಲಯ/ಸಂಸ್ಥೆಯ ಸಂಬಂಧಿಸಿದ ಸಕ್ಷಮ ಪ್ರಾಧಿಕಾರವು ವೈದ್ಯಕೀಯ ವೃತ್ತಿ ಪರೀಕ್ಷೆಯಲ್ಲಿ ಅಂತಿಮವಾಗಿ ಪಾಸು ಮಾಡಿರುವ ಬಗ್ಗೆ ನೀಡಿದ ಪ್ರಮಾಣ ಪತ್ರದ ಪ್ರತಿಯನ್ನು ಒದಗಿಸತಕ್ಕದ್ದು. ಅಂತಹ ಪ್ರಕರಣಗಳಲ್ಲಿ ಅಭ್ಯರ್ಥಿಗಳು ಮೌಖಿಕ ಸಂದರ್ಶನದ ಸಮಯದಲ್ಲಿ ಪದವಿ ಪ್ರದತ್ತ ಮಾಡಿದ ಮೂಲ ಪ್ರಮಾಣ ಪತ್ರ ಅಥವಾ ವಿಶ್ವವಿದ್ಯಾಲಯ/ಸಂಸ್ಥೆಯ ಸಂಬಂಧಿಸಿದ ಸಕ್ಷಮ ಪ್ರಾಧಿಕಾರವು ವೃತ್ತಿ ಪರೀಕ್ಷೆಯ ಎಲ್ಲಾ ಅವಶ್ಯಕತೆಗಳನ್ನು ಪೂರೈಸಿರುತ್ತಾರೆ (ಪ್ರಶಿಕ್ಷಣಾವಧಿಯನ್ನು ಪೂರೈಸಿರುವ ಬಗ್ಗೆಯೂ ಸೇರಿದಂತೆ) ಎಂದು ಪದವಿ ಪ್ರದತ್ತ ಮಾಡಲು ನೀಡುವ ಪ್ರಮಾಣ ಪತ್ರವನ್ನು ಒದಗಿಸತಕ್ಕದ್ದು.

## 8.2 ದೈಹಿಕ ದಾರ್ಢ್ಯತೆ:

ಈ ಕೆಳಕಂಡ ಹುದ್ದೆಗಳಿಗೆ ನಿರ್ದಿಷ್ಟವಾದ ದೈಹಿಕ ದಾರ್ಢ್ಯತೆಯನ್ನು ನಿಗದಿಪಡಿಸಿದ್ದು ಅಂತಹ ದೈಹಿಕ ದಾರ್ಢ್ಯತೆಯನ್ನು ಹೊಂದಿದ್ದಲ್ಲಿ ಮಾತ್ರ ಅಂತಹ ಹುದ್ದೆಗಳಿಗೆ ನೇಮಕಗೊಳ್ಳಲು ಅಭ್ಯರ್ಥಿಯು ಅರ್ಹತೆ ಪಡೆಯುತ್ತಾನೆ/ಳೆ.

| ಕ್ರ. ಸಂ. | ಸೇವೆ | ಪುರುಷ | | | | ಮಹಿಳೆ | | |
|---|---|---|---|---|---|---|---|---|
| | | ಎತ್ತರ | ಎದೆಯ ಸುತ್ತಳತೆ (ಎದೆಯನ್ನು ಪೂರ್ಣವಾಗಿ ವಿಸ್ತರಿಸಿದಾಗ) | ವಿಸ್ತರಣೆ | ತೂಕ | ಎತ್ತರ | ಎದೆಯ ಸುತ್ತಳೆತೆ (ಎದೆಯನ್ನು ಪೂರ್ಣವಾಗಿ ವಿಸ್ತರಿಸಿದಾಗ) | ತೂಕ |
| 01 | ಕರ್ನಾಟಕ ಪೋಲೀಸ್ ಸೇವೆ ಡಿ.ವೈ.ಎಸ್.ಪಿ. (ಸಿವಿಲ್) (ಗ್ರೂಪ್ ಎ) | 165 ಸೆ.ಮೀ | 84 ಸೆಮೀ | 5 ಸೆ.ಮೀ | ಅನ್ವಯವಾಗುವುದಿಲ್ಲ | 157ಸೆಮೀ | ಅನ್ವಯವಾಗುವುದಿಲ್ಲ | ಮಹಿಳೆ ಎತ್ತರಕ್ಕೆ ತಕ್ಕಂತೆ ಆದರೆ 46 ಕೆಜಿಗೆ ಕಡಿಮೆ ಇಲ್ಲದಂತೆ |
| 02 | ಕರ್ನಾಟಕ ರಿಸರ್ವ್ ಪೋಲೀಸ್ ಸೇವೆ | – ಅದೇ– | – ಅದೇ– | – ಅದೇ– | – ಅದೇ– | – ಅದೇ– | – ಅದೇ– | – ಅದೇ– |
| 03 | ಕರ್ನಾಟಕ ಕಾರಾಗೃಹ ಸೇವೆ | 168 ಸೆ.ಮೀ | 86 ಸೆ.ಮೀ | – ಅದೇ– | –ಅದೇ_ | – ಅದೇ– | –ಅದೇ– | –ಅದೇ– |
| 04 | ಅಬಕಾರಿ ಉಪ ಅಧೀಕ್ಷಕರು | 163 ಸೆ.ಮೀ | 81 ಸೆ.ಮೀ | 5 ಸೆ.ಮೀ. | ಅನ್ವಯವಾಗುವುದಿಲ್ಲ | 157 ಸೆ.ಮೀ | ಅನ್ವಯವಾಗುವುದಿಲ್ಲ | 49 ಕೆ.ಜಿ. |

**8.3 <u>ವಯೋಮಿತಿ:</u>–** ಅರ್ಜಿಯನ್ನು On-line ಮೂಲಕ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು 21 ವರ್ಷ ಪೂರೈಸಿರತಕ್ಕದ್ದು ಹಾಗೂ ಗರಿಷ್ಠ ವಯೋಮಿತಿಯನ್ನು ಈ ಕೆಳಕಂಡಂತೆ ಮೀರಿರಬಾರದು.

| | |
|---|---|
| **ಸಾಮಾನ್ಯ ಅರ್ಹತೆ** | **35 ವರ್ಷ** |
| **ಪ್ರವರ್ಗ – 2ಎ, 2ಬಿ, 3ಎ, 3ಬಿ** | **38 ವರ್ಷ** |
| **ಪ.ಜಾ/ಪ.ಪಂ/ಪ್ರ–1** | **40 ವರ್ಷ** |

1. ಅಂಗವಿಕಲರು ಮತ್ತು ವಿಧವೆಯರಿಗೆ ವಯೋಮಿತಿಯಲ್ಲಿ 10 ವರ್ಷಗಳ ಸಡಿಲಿಕೆಯುಂಟು. ಅಂಗವಿಕಲ ಅಭ್ಯರ್ಥಿಗಳು ಸರ್ಕಾರದ ಅಧಿಸೂಚನೆ ಸಂಖ್ಯೆ ಸಿಆಸುಇ 104 ಸೆನೆನಿ 2005 ದಿನಾಂಕ 13–09–2005ರಂತೆ ಸರ್ಕಾರದ ಅಧಿಸೂಚನೆ ಸಂಖ್ಯೆ 115 ಸೆನೆನಿ 2005, ದಿನಾಂಕ 19/11/2005ರಲ್ಲಿ ನಿಗದಿಪಡಿಸಿದಂತೆ ಪ್ರಮಾಣ ಪತ್ರವನ್ನು ತೆಗೆದಿಟ್ಟುಕೊಂಡಿರತಕ್ಕದ್ದು (ಈ ಪ್ರಮಾಣಪತ್ರದ ನಮೂನೆಯನ್ನು ಅನುಬಂಧದಲ್ಲಿ ತೋರಿಸಲಾಗಿದೆ.) ಹಾಗೂ ವಿಧವೆಯರು **"ವಿಧವೆ"** ಎಂಬ ಬಗ್ಗೆ ತಹಸೀಲ್ದಾರರಿಂದ ಪಡೆದ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗಾಗಿ ಪಡೆದಿಟ್ಟುಕೊಂಡಿರತಕ್ಕದ್ದು.
2. ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ ಅವನು ಸಶಸ್ತ್ರ ಕೇಂದ್ರ ದಳದಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವನೋ ಅಷ್ಟು ವರ್ಷಗಳಿಗೆ ಮೂರು ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು.

**ವಿವರಣೆ:–**(1) ಮಾಜಿ ಸೈನಿಕ ಎಂದರೆ ಸಶಸ್ತ್ರ ದಳಗಳಾದ ನಿಯಮಿತ ಭೂದಳ, ನೌಕಾದಳ ಮತ್ತು ವಾಯು ದಳದಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಅಯೋಧನಾಗಿ) ಸೇವೆ ಸಲ್ಲಿಸಿದ ವ್ಯಕ್ತಿ, ಆದರೆ ಡಿಫೆನ್ಸ್ ಸೆಕ್ಯುರಿಟಿ ಕೋರ್, ಜನರಲ್ ರಿಸರ್ವ್ ಇಂಜಿನಿಯರಿಂಗ್ ಫೋರ್ಸ್, ಲೋಕ ಸಹಾಯಕ ಸೇನಾ ಮತ್ತು ಪ್ಯಾರಾ ಮಿಲಿಟರಿ ದಳದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ; ಮತ್ತು

(2) ಕೇಂದ್ರ ಸಶಸ್ತ್ರ ದಳಗಳಲ್ಲಿ ಸೇವೆ ಸಲ್ಲಿಸುವಾಗ ಕೊಲ್ಲಲ್ಪಟ್ಟ ಅಥವಾ ಶಾಶ್ವತವಾಗಿ ದೈಹಿಕ ವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು (ಸಂದರ್ಭಾನುಸಾರ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳು ಮತ್ತು ಮಲಮಕ್ಕಳು) ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ. ಆದರೆ ಅಂತಹವರುಗಳಿಗೆ ವಯೋಮಿತಿ ಸಡಿಲಿಕೆಯನ್ನು ನೀಡಲಾಗುವುದಿಲ್ಲ.

(ಅ) ಅಂತಹ ಸೇವೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವ

**ಅಥವಾ**

(ಆ) ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಯಿಂದ ಬಿಡುಗಡೆಯಾದ ಅಥವಾ ವ್ಯಕ್ತಿಯಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥ್ಯದ ಪಿಂಚಣಿ ಪಡೆದು ಅಂತಹ ಸೇವೆಯಲ್ಲಿ ಬಿಡುಗಡೆಯಾದವನು

**ಅಥವಾ**

(ಇ) ಸ್ವಂತ ಕೋರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇವೆಯಿಂದ ಬಿಡುಗಡೆ ಹೊಂದಿದ ವ್ಯಕ್ತಿ

**ಅಥವಾ**

(ಈ) ತನ್ನ ಸ್ವಂತ ಕೋರಿಕೆಯ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯದ ಕಾರಣದಿಂದಾಗಿ ತೆಗೆದುಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ, ನಿರ್ಧಿಷ್ಟ ಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ವ್ಯಕ್ತಿ ಮತ್ತು ಗ್ರಾಚ್ಯುಟಿ ಪಡೆಯುತ್ತಿರುವ ವ್ಯಕ್ತಿ ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿಯವರು.

1) **ನಿರಂತರ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಪಿಂಚಣಿದಾರರು.**
2) **ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿಕ ಅಸಾಮರ್ಥ್ಯತೆ ಹೊಂದಿ ಬಿಡುಗಡೆಯಾದ ವ್ಯಕ್ತಿ.**
3) **ಗ್ಯಾಲಂಟ್ರ ಪ್ರಶಸ್ತಿ ವಿಜೇತರು**

**ವಿವರಣೆ(1)–** ಕೇಂದ್ರ ಸಶಸ್ತ್ರದಳದ ಸೇವೆಯಲ್ಲಿ ವ್ಯಕ್ತಿಗಳು ಸೇವೆಯಿಂದ ನಿವೃತ್ತಿ ಹೊಂದಿದ ನಂತರ ಮಾಜಿ ಸೈನಿಕರ ವರ್ಗದಡಿ ಬರುವ ವ್ಯಕ್ತಿಗೆ ಒಪ್ಪಂದವು ಪೂರ್ಣವಾಗಲು ಒಂದು ವರ್ಷಕ್ಕೆ ಮುನ್ನ ಉದ್ಯೋಗಕ್ಕೆ ಅರ್ಜಿ ಹಾಕಿಕೊಳ್ಳಲು ಹಾಗೂ ಅವರಿಗೆ ಮಾಜಿ ಸೈನಿಕರಿಗೆ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಹೊಂದಲು ಅನುಮತಿ ನೀಡಲಾಗಿದೆ. ಆದರೆ ಸಮವಸ್ತ್ರವನ್ನು ತ್ಯಜಿಸಲು ಅನುಮತಿ ನೀಡುವವರೆಗೆ ರಾಜ್ಯ ನಾಗರೀಕ ಸೇವೆ ಅಥವಾ ಹುದ್ದೆಗಳಿಗೆ ನೇಮಕ ಹೊಂದುವಂತಿಲ್ಲ.

**ವಿವರಣೆ(2)–ಜನ್ಮ ದಿನಾಂಕಕ್ಕಾಗಿ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ವಿದ್ಯಾರ್ಹತೆಯ ಅಂಕಪಟ್ಟಿ, ವರ್ಗಾವಣೆ ಪ್ರಮಾಣ ಪತ್ರ (ಟಿ..ಸಿ./ಕ್ಯುಮುಲೇಟಿವ್ ರೆಕಾರ್ಡ್)ದಲ್ಲಿ ನಮೂದಿಸಿರುವಂತೆ ಜನ್ಮ ದಿನಾಂಕವನ್ನು ಆಯೋಗವು ಒಪ್ಪಿಕೊಳ್ಳುವುದು. ಇತರೆ ಯಾವುದೇ ದಾಖಲೆಗಳನ್ನು ಪರಿಗಣಿಸಲಾಗುವುದಿಲ್ಲ.**

## 9. ಜಾತಿ / ಮೀಸಲಾತಿ ಪ್ರಮಾಣ ಪತ್ರಗಳು:–

ಮೀಸಲಾತಿ ಕೋರ ಬಯಸುವ ಅಭ್ಯರ್ಥಿಗಳು ಈ ಕೆಳಗೆ ನಮೂದಿಸಿರುವ ನಮೂನೆಗಳಲ್ಲಿಯೇ ಮೀಸಲಾತಿ ಪ್ರಮಾಣ ಪತ್ರಗಳನ್ನು ಪೂರ್ವಭಾವಿ ಪರೀಕ್ಷೆಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು:–

ಅ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು:– ನಮೂನೆ ' ಡಿ '
ಆ) ಪ್ರವರ್ಗ–1 ಕ್ಕೆ ಸೇರಿದ ಅಭ್ಯರ್ಥಿಗಳು:– ನಮೂನೆ ' ಇ '
ಇ) ಪ್ರವರ್ಗ–2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು:– ನಮೂನೆ ' ಎಫ್ '

ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣ ಪತ್ರವನ್ನು ಸಂಬಂಧಿತ ತಹಸೀಲ್ದಾರ್‌ರವರಿಂದ ಪಡೆದಿಟ್ಟುಕೊಂಡು ಅರ್ಜಿಯ ನಿಗದಿತ ಸ್ಥಳದಲ್ಲಿ ಪ್ರಮಾಣ ಪತ್ರ ಜಾರಿ ಮಾಡಿದ ದಿನಾಂಕವನ್ನು ತಪ್ಪದೇ ನಮೂದಿಸತಕ್ಕದ್ದು, ಹಾಗೂ ಅದೇ ಪ್ರಮಾಣ ಪತ್ರವನ್ನು ಸಂದರ್ಶನ ಸಮಯದಲ್ಲಿ ಹಾಜರುಪಡಿಸತಕ್ಕದ್ದು.

ಸಂದರ್ಶನಕ್ಕೆ ಅರ್ಹರಾದಾಗ ಸಂದರ್ಶನ ಸಮಯದಲ್ಲಿ ಈ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಿ ಅವರ ಅಭ್ಯರ್ಥಿತನವನ್ನು ಅರ್ಹರಾದಲ್ಲಿ ಮಾತ್ರ ಸಾಮಾನ್ಯ ಅರ್ಹತೆಯಡಿಯಲ್ಲಿ ಪರಿಗಣಿಸಲಾಗುವುದು. ಈ ಪ್ರಮಾಣ ಪತ್ರಗಳ ನಮೂನೆಗಳನ್ನು ಅನುಬಂಧದಲ್ಲಿ ತೋರಿಸಲಾಗಿದೆ. ಈ ನಮೂನೆಗಳನ್ನು ಹೊರತುಪಡಿಸಿ ಇತರೆ ಯಾವುದೇ ನಮೂನೆಗಳಲ್ಲಿ ಪಡೆಯಲಾದ ಮೀಸಲಾತಿ ಪ್ರಮಾಣ ಪತ್ರಗಳನ್ನು ತಿರಸ್ಕರಿಸಲಾಗುವುದು.

### 9.1 ಗ್ರಾಮೀಣ ಅಭ್ಯರ್ಥಿ

ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ 08 ಸೆನೆನಿ 2001 ದಿನಾಂಕ 13–02–2001 ರನ್ವಯ ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳ ರೀತ್ಯಾ 1 ರಿಂದ 10ನೇ ತರಗತಿಯವರೆಗೆ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರು. ಗ್ರಾಮೀಣ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮ್ ಮಾಡುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ನಮೂನೆ–2ನ್ನು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜುವಿನೊಂದಿಗೆ ಹಾಗೂ ಈ ಪ್ರಮಾಣ ಪತ್ರವಲ್ಲದೇ ಮೇಲುಸ್ಥರಕ್ಕೆ ಸೇರಿಲ್ಲದಿರುವ ಬಗ್ಗೆ ನಮೂನೆ–1 ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂಧಿತ ತಹಶೀಲ್ದಾರ್ ರವರಿಂದ ಪಡೆದಿಟ್ಟುಕೊಂಡಿರತಕ್ಕದ್ದು. ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, ಪ್ರವರ್ಗ–2ಎ, 2ಬಿ, 3ಎ, 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ–2ರಲ್ಲಿ ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜುವಿನೊಂದಿಗೆ ಪಡೆದಿಟ್ಟುಕೊಂಡಿರತಕ್ಕದ್ದು. ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ಜಾರಿ ಮಾಡಿದ ದಿನಾಂಕವನ್ನು ತಪ್ಪದೇ ಅರ್ಜಿಯ ಸಂಬಂಧಪಟ್ಟ ಅಂಕಣದಲ್ಲಿ ನಮೂದಿಸತಕ್ಕದ್ದು ಹಾಗೂ ಸಂದರ್ಶನಕ್ಕೆ ಅರ್ಹರಾದಾಗ ಸಂದರ್ಶನ ಸಮಯದಲ್ಲಿ ಇದೇ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು. (ಇತರೆ ನಮೂನೆಗಳಲ್ಲಿ ಸಲ್ಲಿಸಲ್ಪಡುವ ಮೀಸಲಾತಿ ಪ್ರಮಾಣ ಪತ್ರಗಳನ್ನು ತಿರಸ್ಕರಿಸಲಾಗುವುದು) ಹಾಗೂ ಅಂತಹವರು ಗ್ರಾಮೀಣ ಮೀಸಲಾತಿಗೆ ಅನರ್ಹರಾಗುತ್ತಾರೆ. ಈ ಪ್ರಮಾಣ ಪತ್ರಗಳ ನಮೂನೆಗಳನ್ನು ಅನುಬಂಧದಲ್ಲಿ ತೋರಿಸಲಾಗಿದೆ.

### 9.2 ಕನ್ನಡ ಮಾಧ್ಯಮ ಅಭ್ಯರ್ಥಿ

ಸರ್ಕಾರಿ ಅಧಿಸೂಚನೆ ಸಂಖ್ಯೆ ಸಿಆಸುಇ 71 ಸೆನೆನಿ 2001 ದಿನಾಂಕ 24–10–2002 ರನ್ವಯ ಕನ್ನಡ ಮಾಧ್ಯಮದ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು 1ನೇ ತರಗತಿಯಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಹಾಗೂ ಮೊಹರಿನೊಂದಿಗೆ ಪಡೆದಿಟ್ಟುಕೊಂಡಿರತಕ್ಕದ್ದು. ಪ್ರಮಾಣ ಪತ್ರ ಜಾರಿ ಮಾಡಿದ ದಿನಾಂಕವನ್ನು ತಪ್ಪದೇ ಅರ್ಜಿಯ ಸಂಬಂಧಪಟ್ಟ ಅಂಕಣದಲ್ಲಿ ನಮೂದಿಸತಕ್ಕದ್ದು ಹಾಗೂ ಸಂದರ್ಶನಕ್ಕೆ ಅರ್ಹರಾದಾಗ ಸಂದರ್ಶನ ಸಮಯದಲ್ಲಿ ಇದೇ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು. ಈ ಪ್ರಮಾಣ ಪತ್ರಗಳ ನಮೂನೆಗಳನ್ನು ಅನುಬಂಧದಲ್ಲಿ ತೋರಿಸಲಾಗಿದೆ.

### 9.3 ಅಂಗವಿಕಲ ಅಭ್ಯರ್ಥಿ

ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 50 ಎಸ್‌ಆರ್‌ಆರ್ 2000 ದಿನಾಂಕ 03–09–2005 ರಲ್ಲಿ ರಾಜ್ಯ ಸಿವಿಲ್ ಸೇವೆಗಳ ಸಮೂಹ –'ಎ ' ಮತ್ತು 'ಬಿ' ಗುಂಪಿನ ಹುದ್ದೆಗಳಿಗೆ ಶೇಕಡ 3 ರಷ್ಟು (ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 21 ಎಸ್‌ಆರ್‌ಆರ್ 2008 ದಿನಾಂಕ 03–08–2009ರ ಅನುಸೂಚಿಯಡಿ ಸೇರ್ಪಡೆ ಮಾಡಲಾಗಿರುವ ಇಲಾಖೆಗಳು) ಹುದ್ದೆಗಳನ್ನು ಅಂಗವಿಕಲರಿಗೆ ಮೀಸಲಾತಿ ಕಲ್ಪಿಸಿದ್ದು, ಇದರನ್ವಯ ಶೇಕಡ 40 ಕ್ಕಿಂತ ಕಡಿಮೆ ಇಲ್ಲದಂತಹ ಅಂಗವಿಕಲತೆಯುಳ್ಳ ಅಭ್ಯರ್ಥಿಗಳು ಮಾತ್ರ ಈ ಮೀಸಲಾತಿಯನ್ನು ಕೋರಲು ಅರ್ಹರು.

ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ ಸಿಆಸುಇ 115 ಸೇನೆನಿ 2005 ದಿನಾಂಕ 19–11–2005ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪಡೆದಿಟ್ಟುಕೊಂಡಿರತಕ್ಕದ್ದು ಪ್ರಮಾಣ ಪತ್ರ ಜಾರಿ ಮಾಡಿದ ದಿನಾಂಕವನ್ನು ತಪ್ಪದೇ ಅರ್ಜಿಯ ಸಂಬಂಧಪಟ್ಟ ಅಂಕಣದಲ್ಲಿ ನಮೂದಿಸತಕ್ಕದ್ದು ಹಾಗೂ ಸಂದರ್ಶನಕ್ಕೆ ಅರ್ಹರಾದಾಗ ಸಂದರ್ಶನ ಸಮಯದಲ್ಲಿ ಇದೇ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು. ಈ ಪ್ರಮಾಣ ಪತ್ರದ ನಮೂನೆಯನ್ನು ಅನುಬಂದದಲ್ಲಿ ತೋರಿಸಲಾಗಿದೆ. ಇತರೆ ಯಾವುದೇ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು / ಗುರುತಿನ ಚೀಟಿಯ ಪ್ರತಿಗಳನ್ನು ಪರಿಗಣಿಸುವುದಿಲ್ಲ.

**ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 74 ಸೇನೆನಿ 2006, ದಿನಾಂಕ: 30–10–2007ರ ಪ್ರಕಾರ ಅಂಧ/ ದೃಷ್ಟಿಮಾಂದ್ಯ ಅಭ್ಯರ್ಥಿಗಳಿಗೆ ಆಯೋಗವು ವೈದ್ಯಕೀಯ ಮಂಡಳಿಯ ಮುಂದೆ ತಪಾಸಣೆ ನಡೆಸಿ ವೈದ್ಯಕೀಯ ವರದಿಯ ಆಧಾರದ ಮೇರೆಗೆ ಪರೀಕ್ಷೆಯನ್ನು ಬರೆಯಲು ಲಿಪಿಕಾರರನ್ನು ಮತ್ತು ಹೆಚ್ಚಿನ ಕಾಲಾವಕಾಶವನ್ನು ನೀಡಲಾಗುವುದು.**

### 9.4. ಸೇವಾನಿರತ ಅಭ್ಯರ್ಥಿ:–

ಸೇವೆಯಲ್ಲಿರುವ ಅಭ್ಯರ್ಥಿಗಳು ಸೇವಾ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಅವರುಗಳ ನೇಮಕಾತಿ ಪ್ರಾಧಿಕಾರಿಗಳಿಂದ ಪೂರ್ವಭಾವಿ ಪರೀಕ್ಷೆಗೆ ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು. ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ನಿರಾಕ್ಷೇಪಣ ಪ್ರಮಾಣ ಪತ್ರವು (NOC) ಇಲ್ಲದಿದ್ದಲ್ಲಿ ಅಂತಹ ಅಭ್ಯರ್ಥಿಗಳ ಅಭ್ಯರ್ಥಿತ್ವವನ್ನು ರದ್ದುಗೊಳಿಸಲಾಗುವುದು.

ಸೈನಿಕ ಸೇವಾ ಒಪ್ಪಂದದ ಮುಕ್ತಾಯಕ್ಕೆ ಮುನ್ನ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಅವರ ಮೇಲಾಧಿಕಾರಿಗಳಿಂದ ನಿರಾಕ್ಷೇಪಣ ಪ್ರಮಾಣ ಪತ್ರವನ್ನು ಪಡೆದು ಅದರ ದಿನಾಂಕವನ್ನು ಅರ್ಜಿಯಲ್ಲಿ ನಮೂದಿಸಬೇಕು ಹಾಗೂ ಸಂದರ್ಶನ ಸಮಯದಲ್ಲಿ ಅದನ್ನು ಹಾಜರುಪಡಿಸಬೇಕು.

### 10. ಆಯೋಗದೊಡನೆ ಪತ್ರ ವ್ಯವಹಾರ:

ಆಯೋಗವು ಅಭ್ಯರ್ಥಿಗಳೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸುವುದಿಲ್ಲ. ಸಂದರ್ಶನಕ್ಕೆ ಅನುಮತಿಸಲಾದ ಅಭ್ಯರ್ಥಿಯಾಗಿದ್ದರೆ ಸಂದರ್ಶನ ಪತ್ರ ತಲುಪದ ಅಭ್ಯರ್ಥಿಗಳಿಗೆ ನಕಲನ್ನು ನೀಡಲಾಗುವುದು.

ವಿಳಾಸ ಬದಲಾವಣೆ ಇದ್ದಲ್ಲಿ ಅಭ್ಯರ್ಥಿಗಳು ಲಿಖಿತ ಮೂಲಕ ಆಯೋಗದ ಗಮನಕ್ಕೆ ತರತಕ್ಕದ್ದು. ಈ ವಿಳಾಸ ಬದಲಾವಣೆಯನ್ನು ಪರಿಗಣಿಸಲು ಆಯೋಗವು ಪ್ರಯತ್ನಿಸುವುದು. ಆದಾಗ್ಯೂ ಈ ವಿಚಾರದಲ್ಲಿ ಆಯೋಗವು ಯಾವುದೇ ಜವಾಬ್ದಾರಿಯನ್ನು ವಹಿಸಿಕೊಳ್ಳುವುದಿಲ್ಲ. ಈ ಬಗ್ಗೆ ಅಭ್ಯರ್ಥಿಗಳು ಎಚ್ಚರ ವಹಿಸತಕ್ಕದ್ದು. ಅಭ್ಯರ್ಥಿಗಳು ಆಯೋಗದೊಡನೆ ಸಂಪರ್ಕಿಸಲೇಬೇಕಾದ ಸಂದರ್ಭದಲ್ಲಿ ತಮ್ಮ ಮನವಿಯಲ್ಲಿ ಕೆಳಕಂಡ ಮಾಹಿತಿಗಳು ಒಳಗೊಂಡಿರಬೇಕು:–

**(i)** ಹುದ್ದೆಯ / ವಿಷಯದ ಹೆಸರು

**(ii)** ಅಭ್ಯರ್ಥಿಯ ಪೂರ್ಣ ಹೆಸರು ಹಾಗೂ ಇ–ಮೇಲ್ ಐಡಿ (ಬಿಡಿ ಅಕ್ಷರಗಳಲ್ಲಿ)

**(iii)** ಅರ್ಜಿಯಲ್ಲಿ ನಮೂದಿಸಿರುವ ಅಂಚೆ ವಿಳಾಸ

11. **<u>ಪ್ರಾಮುಖ್ಯವಾದ ಸೂಚನೆಗಳು :</u>**

**ಕೆಳಕಂಡ ಪ್ರಮಾಣ ಪತ್ರಗಳನ್ನು ಪೂರ್ವಭಾವಿ ಪರೀಕ್ಷೆಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗಾಗಿ ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ಆಯೋಗವು ಸೂಚಿಸಿದಾಗ ಹಾಜರುಪಡಿಸತಕ್ಕದ್ದು.**

1) ಹುದ್ದೆಗೆ ನಿಗದಿಪಡಿಸಲಾದ ವಿದ್ಯಾರ್ಹತೆಯ ಪ್ರಮಾಣ ಪತ್ರಗಳು/ಎಲ್ಲಾ ವರ್ಷಗಳ ಅಂಕಪಟ್ಟಿಗಳು/ಪದವಿಯ ಘಟಿಕೋತ್ಸವ ಪ್ರಮಾಣ ಪತ್ರ (ಅಂತಿಮ ವರ್ಷದ ಫಲಿತಾಂಶ ಪ್ರಕಟಗೊಳ್ಳದೇ ಇರುವ ಅಭ್ಯರ್ಥಿಗಳನ್ನು ಹೊರತುಪಡಿಸಿ)
2) ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಅಂಕಪಟ್ಟಿ / ವರ್ಗಾವಣೆಯ ಪ್ರಮಾಣ ಪತ್ರ(ಟಿ.ಸಿ.)/ಜನ್ಮ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉದ್ಧೃತ ಭಾಗ (Extract of the Cumulative Record)
3) ಸೈನಿಕ ಸೇವೆಯಿಂದ ಬಿಡುಗಡೆಯಾದ / ಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
4) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, ಪ್ರವರ್ಗ–2ಎ, 2ಬಿ, 3ಎ, 3ಬಿ ಮಿಸಲಾತಿ ಅಭ್ಯರ್ಥಿಗಳು **ನಮೂನೆ ಡಿ/ಇ/ಎಫ್** ನಲ್ಲಿ ತಹಶೀಲ್ದಾರ್‌ರಿಂದ ಪಡೆದ ಪ್ರಮಾಣ ಪತ್ರ.(ಮೀಸಲಾತಿ ಕೋರಿದ್ದಲ್ಲಿ)
5) ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ–1 ಮತ್ತು 2ರಲ್ಲಿ (ಮೀಸಲಾತಿ ಕೋರಿದ್ದಲ್ಲಿ)
6) ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
7) ತಹಸೀಲ್ದಾರರಿಂದ ಪಡೆದ ವಿಧವಾ ಪ್ರಮಾಣ ಪತ್ರ (ವಯೋಮಿತಿಯಲ್ಲಿ ಸಡಿಲಿಕೆ ಕೋರಿದ್ದಲ್ಲಿ)
8) ಅಂಗವಿಕಲ ಪ್ರಮಾಣ ಪತ್ರ ನಿಗದಿತ ನಮೂನೆಯಲ್ಲಿ (ವಯೋಮಿತಿಯಲ್ಲಿ ಸಡಿಲಿಕೆ ಹಾಗೂ ಮೀಸಲಾತಿ ಕೋರಿದ್ದಲ್ಲಿ)
9) ಅಪೂರ್ಣವಾಗಿರುವ, ಫೋಟೋ ಅಪ್‌ಲೋಡ್ ಮಾಡದೇ ಇರುವ ಮತ್ತು ಸಹಿ ಮಾಡದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
10) ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಭರ್ತಿ ಮಾಡಿ ಸಲ್ಲಿಸಿದ ಅರ್ಜಿಯ ಒಂದು ಫೋಟೋ ಪ್ರತಿಯನ್ನು ಕಡ್ಡಾಯವಾಗಿ ತಮ್ಮೊಂದಿಗೆ ಇಟ್ಟುಕೊಳ್ಳಲು ಸೂಚಿಸಿದೆ.
11) ಸೇವೆಯಲ್ಲಿರುವ ಅಭ್ಯರ್ಥಿಗಳು ಸೇವಾ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಅವರುಗಳ ನೇಮಕಾತಿ ಪ್ರಾಧಿಕಾರಿಗಳಿಂದ ಪೂರ್ವಭಾವಿ ಪರೀಕ್ಷೆಗೆ ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು.
12) ಅಭ್ಯರ್ಥಿಗಳು ತಮ್ಮ ಅರ್ಜಿಗಳಲ್ಲಿ ನೀಡುವ ಮಾಹಿತಿಗಳ ಆಧಾರದ ಮೇಲೆ ಅವರುಗಳು ಸ್ಪರ್ಧಾತ್ಮಕ ಪೂರ್ವಭಾವಿ ಪರೀಕ್ಷೆಯನ್ನು ಬರೆಯಲು ಅರ್ಹರೆ ಎಂಬುದನ್ನು ಆಯೋಗವು ಪರಿಶೀಲಿಸಿ ಮೇಲು ನೋಟಕ್ಕೆ ಅರ್ಹರೆಂದು ಕಂಡುಬಂದ ಅಭ್ಯರ್ಥಿಗಳಿಗೆ ಮಾತ್ರ ಪ್ರವೇಶ ಪತ್ರಗಳನ್ನು ಆನ್‌ಲೈನ್ ಮುಖಾಂತರ ಡೌನ್‌ಲೋಡ್ ಮಾಡಿಕೊಳ್ಳಲು ಅನುಮತಿಸಲಾಗುವುದು. ಆದ್ದರಿಂದ ನಿಗದಿಪಡಿಸಿರುವ ವಯೋಮಿತಿ, ವಿದ್ಯಾರ್ಹತೆ, ಮೀಸಲಾತಿ, ಇತ್ಯಾದಿಗಳಿಗನುಗುಣವಾಗಿ ಅರ್ಜಿಯಲ್ಲಿ ಸರಿಯಾದ ಮಾಹಿತಿ ನೀಡುವುದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ. ಇಲ್ಲದಿದ್ದಲ್ಲಿ ಅಥವಾ ತಪ್ಪು ಮಾಹಿತಿ ನೀಡಿದಲ್ಲಿ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
13) ಅಭ್ಯರ್ಥಿಗಳು ಮುಖ್ಯ ಪರೀಕ್ಷೆಗೆ ಅರ್ಹರಾದಲ್ಲಿ ಮುಖ್ಯ ಪರೀಕ್ಷೆಯ ಅರ್ಜಿಯೊಂದಿಗೆ ತಮ್ಮ ಪೂರ್ವಭಾವಿ ಪರೀಕ್ಷೆಯ ಅರ್ಜಿಯಲ್ಲಿ ಕೋರಿರುವ ಮೀಸಲಾತಿ ಪ್ರಮಾಣ ಪತ್ರಗಳನ್ನು ನಿಗದಿತ ನಮೂನೆಯಲ್ಲಿ ಸಲ್ಲಿಸದಿದ್ದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಗಳನ್ನು ತಿರಸ್ಕರಿಸಲಾಗುವುದು. ಆದುದರಿಂದ ಪೂರ್ವಭಾವಿ ಪರೀಕ್ಷೆಯ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗಾಗಿ ನಿಗದಿತ ನಮೂನೆಯಲ್ಲಿ ಎಲ್ಲಾ ಮೀಸಲಾತಿ ಪ್ರಮಾಣ ಪತ್ರಗಳನ್ನು (ಮೀಸಲಾತಿ ಕೋರಿರುವ) ಪಡೆದಿಟ್ಟುಕೊಂಡಿದ್ದು, ಸದರಿ ಪ್ರಮಾಣ ಪತ್ರಗಳ ಪ್ರತಿಗಳನ್ನು ಮುಖ್ಯ ಪರೀಕ್ಷೆಯ ಅರ್ಜಿಯೊಂದಿಗೆ ಸಲ್ಲಿಸತಕ್ಕದ್ದು. ಪೂರ್ವಭಾವಿ ಪರೀಕ್ಷೆಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದ ನಂತರ ಜಾರಿಯಾಗಿರುವ ಪ್ರಮಾಣ ಪತ್ರಗಳನ್ನು ಸಲ್ಲಿಸಿದಲ್ಲಿ ಅಂತಹ ಮೀಸಲಾತಿ ಪ್ರಮಾಣ ಪತ್ರಗಳನ್ನು ತಿರಸ್ಕರಿಸಲಾಗುವುದು.

12. **ಅರ್ಜಿಯಲ್ಲಿ ಮೀಸಲಾತಿಗೆ ಸಂಬಂಧಿಸಿದ ಅಂಕಣದಲ್ಲಿ ಉಪಯೋಗಿಸಿದ ಪದಗಳ ಅರ್ಥವನ್ನು ಈ ಕೆಳಕಂಡಂತೆ ಅರ್ಥೈಸಿಕೊಳ್ಳಬೇಕು:–**

| | | | |
|---|---|---|---|
| ಸಾ.ಅ | ಸಾಮಾನ್ಯ ಅರ್ಹತೆ | GM | General Merit |
| ಪ.ಜಾ | ಪರಿಶಿಷ್ಟ ಜಾತಿ | SC | Scheduled Caste |
| ಪ.ಪಂ | ಪರಿಶಿಷ್ಟ ಪಂಗಡ | ST | Scheduled Tribe |
| ಪ್ರ–1 | ಪ್ರವರ್ಗ–1 | Cat – 1 | Category – I |
| 2ಎ | ಪ್ರವರ್ಗ–2ಎ | 2A | Category – 2A |

| | | | |
|---|---|---|---|
| 2ಬಿ | ಪ್ರವರ್ಗ–2ಬಿ | 2B | Category – 2B |
| 3ಎ | ಪ್ರವರ್ಗ–3ಎ | 3A | Category – 3A |
| 3ಬಿ | ಪ್ರವರ್ಗ–3ಬಿ | 3B | Category – 3B |
| ಮಾ.ಸೈ | ಮಾಜಿ ಸೈನಿಕ | Ex-MP | Ex-Military Person |
| ಗ್ರಾಮೀಣ | ಗ್ರಾಮೀಣ ಅಭ್ಯರ್ಥಿ | Rural | Rural Reservation |
| ಕ.ಮಾ.ಅ | ಕನ್ನಡ ಮಾಧ್ಯಮ ಅಭ್ಯರ್ಥಿ | KMS | Kannada Medium Student |
| ಅಂ.ವಿ. | ಅಂಗವಿಕಲ ಅಭ್ಯರ್ಥಿ | PH | Physically Handicapped |

13. **ವಿಶೇಷ ಸೂಚನೆಗಳು:–**

(1) **ON LINE** ಮೂಲಕ ಅರ್ಜಿ ಸಲ್ಲಿಸುವಾಗ ಎಲ್ಲಾ ಮಾಹಿತಿಗಳನ್ನು ಸರಿಯಾಗಿ ಭರ್ತಿ ಮಾಡಿರುವ ಬಗ್ಗೆ ಖಚಿತಪಡಿಸಿಕೊಂಡು ನಂತರ ಅದರ ಒಂದು ಪ್ರತಿಯನ್ನು ಕಡ್ಡಾಯವಾಗಿ ಡೌನ್ ಲೋಡ್ ಮಾಡಿಕೊಂಡು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ಭದ್ರವಾಗಿ ತೆಗೆದಿಟ್ಟುಕೊಂಡಿರತಕ್ಕದ್ದು.

(2) ಈಗಾಗಲೇ ಸೇವೆಯಲ್ಲಿರುವ / ಸೇವೆ ಸಲ್ಲಿಸಿದ ಅಭ್ಯರ್ಥಿಗಳು ಅವರುಗಳ ನೇಮಕಾತಿ ಪ್ರಾಧಿಕಾರಿಗಳಿಂದ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ನಿರಾಕ್ಷೇಪಣಾ ಪತ್ರಗಳನ್ನು ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ವಿವರಗಳನ್ನು ಅರ್ಜಿಯಲ್ಲಿ ನಮೂದಿಸತಕ್ಕದ್ದು.

**(3) ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆಗಳು:**

| | | |
|---|---|---|
| ಕೇಂದ್ರ ಕಛೇರಿಯ ಮಾಹಿತಿ ಕೇಂದ್ರ | : | 080–30574957 |
| ಪ್ರಾಂತೀಯ ಕಛೇರಿ ಮೈಸೂರು | : | 0821–2545956 |
| ಪ್ರಾಂತೀಯ ಕಛೇರಿ ಬೆಳಗಾವಿ | : | 0831–2475345 |
| ಪ್ರಾಂತೀಯ ಕಛೇರಿ ಗುಲ್ಬರ್ಗಾ | : | 08472–227944 |
| ಪ್ರಾಂತೀಯ ಕಛೇರಿ ಶಿವಮೊಗ್ಗ | : | 08182–228099 |

**ದುರ್ನಡತೆ:–** ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಸಂದರ್ಶನದಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವನೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು, ಕಂಡುಬಂದಲ್ಲಿ ಅವನು/ಅವಳು ಸ್ವತ: ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ; ಹುದ್ದೆಯ ಸಂದರ್ಶನದಿಂದ/ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.

**(ಡಾ॥ ಡಿ.ಎಸ್.ವಿಶ್ವನಾಥ್)**
ಕಾರ್ಯದರ್ಶಿ,
ಕರ್ನಾಟಕ ಲೋಕಸೇವಾ ಆಯೋಗ.

# ಅನುಬಂಧ

## ಕರ್ನಾಟಕ ಆಡಳಿತ ಸೇವೆ (ಕೆ.ಎ.ಎಸ್. ಗ್ರೂಪ್–'ಎ' ಕಿರಿಯ ಶ್ರೇಣಿ)

## KARNATAKA ADMINISTRATIVE SERVICE (GROUP 'A' JUNIOR SCALE) ASSISTANT COMMISSIONER

| ಮೀಸಲಾತಿ ವರ್ಗ | ಇತರೆ | ಮಹಿಳೆ | ಗ್ರಾಮೀಣ | ಮಾಜಿ ಸೈನಿಕ | ಕ.ಮಾ.ಅ. | ಅಂ.ವಿ. | ಒಟ್ಟು |
|---|---|---|---|---|---|---|---|
| ಸಾಮಾನ್ಯ ವರ್ಗ | 02 | 03 | 03 | 01 | 01 | –– | **10** |
| ಪರಿಶಿಷ್ಟ ಜಾತಿ | 01 | 01 | 01 | –– | –– | –– | **03** |
| ಪರಿಶಿಷ್ಟ ಪಂಗಡ | –– | 01 | –– | –– | –– | –– | **01** |
| ಪ್ರವರ್ಗ–1 | –– | | 01 | –– | –– | –– | **01** |
| ಪ್ರವರ್ಗ–2ಎ | 01 | 01 | –– | –– | –– | –– | **02** |
| ಪ್ರವರ್ಗ–2ಬಿ | –– | –– | 01 | –– | –– | –– | **01** |
| ಪ್ರವರ್ಗ–3ಎ | –– | –– | 01 | –– | –– | –– | **01** |
| ಪ್ರವರ್ಗ–3ಬಿ | 01 | –– | –– | –– | –– | –– | **01** |
| **ಒಟ್ಟು** | **05** | **06** | **07** | **01** | **01** | –– | **20** |

## ಸಹಾಯಕ ನಿಯಂತ್ರಕರು (ರಾಜ್ಯ ಲೆಕ್ಕ ಪತ್ರ ಇಲಾಖೆ)

## ASSISTANT CONTROLLER (SAD) GROUP-A

| ಮೀಸಲಾತಿ ವರ್ಗ | ಇತರೆ | ಮಹಿಳೆ | ಗ್ರಾಮೀಣ | ಮಾಜಿ ಸೈನಿಕ | ಕ.ಮಾ.ಅ. | ಅಂ.ವಿ. | ಒಟ್ಟು |
|---|---|---|---|---|---|---|---|
| ಸಾಮಾನ್ಯ ವರ್ಗ | 03 | 03 | 01 | 01 | –– | –– | **08** |
| ಪರಿಶಿಷ್ಟ ಜಾತಿ | 01 | 01 | –– | –– | –– | –– | **02** |
| ಪರಿಶಿಷ್ಟ ಪಂಗಡ | –– | –– | –– | –– | –– | –– | –– |
| ಪ್ರವರ್ಗ–1 | –– | –– | –– | –– | –– | –– | –– |
| ಪ್ರವರ್ಗ–2ಎ | 01 | 01 | –– | –– | –– | –– | **02** |
| ಪ್ರವರ್ಗ–2ಬಿ | –– | 01 | –– | –– | –– | –– | **01** |
| ಪ್ರವರ್ಗ–3ಎ | –– | 01 | –– | –– | –– | –– | **01** |
| ಪ್ರವರ್ಗ–3ಬಿ | –– | –– | 01 | –– | –– | –– | **01** |
| **ಒಟ್ಟು** | **05** | **07** | **02** | **01** | –– | –– | **15** |

## ವಾಣಿಜ್ಯ ತೆರಿಗೆ ಸಹಾಯಕ ಆಯುಕ್ತರು

## ASSISTANT COMMISSIONER COMMERCIAL TAXES GROUP-A

| ಮೀಸಲಾತಿ ವರ್ಗ | ಇತರೆ | ಮಹಿಳೆ | ಗ್ರಾಮೀಣ | ಮಾಜಿ ಸೈನಿಕ | ಕ.ಮಾ.ಅ. | ಅಂ.ವಿ. | ಒಟ್ಟು |
|---|---|---|---|---|---|---|---|
| ಸಾಮಾನ್ಯ ವರ್ಗ | 04 | 05 | 05 | 02 | 01 | –– | **17** |
| ಪರಿಶಿಷ್ಟ ಜಾತಿ | 01 | 01 | 02 | –– | 01 | –– | **05** |
| ಪರಿಶಿಷ್ಟ ಪಂಗಡ | 01 | –– | –– | –– | –– | –– | **01** |
| ಪ್ರವರ್ಗ–1 | 01 | 01 | –– | –– | –– | –– | **02** |
| ಪ್ರವರ್ಗ–2ಎ | –– | 01 | 02 | –– | 01 | –– | **04** |
| ಪ್ರವರ್ಗ–2ಬಿ | 01 | 01 | –– | –– | –– | –– | **02** |
| ಪ್ರವರ್ಗ–3ಎ | 01 | –– | –– | –– | –– | –– | **01** |
| ಪ್ರವರ್ಗ–3ಬಿ | 01 | 01 | –– | –– | –– | –– | **02** |
| **ಒಟ್ಟು** | **10** | **10** | **09** | **02** | **03** | –– | **34** |

**ಖಜಾನಾಧಿಕಾರಿ (ಖಜಾನೆ ಇಲಾಖೆ)**

**TREASURY OFFICER ( TREASURY DEPARTMENT)**
**GROUP-A**

| ಮೀಸಲಾತಿ ವರ್ಗ | ಇತರೆ | ಮಹಿಳೆ | ಗ್ರಾಮೀಣ | ಮಾಜಿ ಸೈನಿಕ | ಕ.ಮಾ.ಅ. | ಅಂ.ವಿ. | ಒಟ್ಟು |
|---|---|---|---|---|---|---|---|
| ಸಾಮಾನ್ಯ ವರ್ಗ | -- | 01 | -- | -- | -- | -- | **01** |
| ಪರಿಶಿಷ್ಟ ಜಾತಿ | -- | -- | -- | -- | -- | -- | -- |
| ಪರಿಶಿಷ್ಟ ಪಂಗಡ | -- | -- | -- | -- | -- | -- | -- |
| ಪ್ರವರ್ಗ-1 | 01 | -- | -- | -- | -- | -- | **01** |
| ಪ್ರವರ್ಗ-2ಎ | -- | -- | -- | -- | -- | -- | -- |
| ಪ್ರವರ್ಗ-2ಬಿ | -- | -- | -- | -- | -- | -- | -- |
| ಪ್ರವರ್ಗ-3ಎ | -- | -- | -- | -- | -- | -- | -- |
| ಪ್ರವರ್ಗ-3ಬಿ | -- | -- | -- | -- | -- | -- | -- |
| **ಒಟ್ಟು** | **01** | **01** | -- | -- | -- | -- | **02** |

**ಸಹಾಯಕ ಕಾರ್ಮಿಕ ಆಯುಕ್ತರು (ಕಾರ್ಮಿಕ ಇಲಾಖೆ)**

**ASSISTANT LABOUR COMMISSIONER ( LABOUR DEPARTMENT)**
